ವಿಜಯಪುರ | ಸಂಪುಟ 01 | ಸಂಚಿಕೆ 226 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com | Title Code: KARKAN28047 | ಮಂಗಳವಾರ, ಅಕ್ಟೋಬರ್ 31, 2023

"ಹಡೆದ ತಂದೆ ತಾಯಿಗಳನ್ನೇ ಅನಾಥಾ ಶ್ರಮಕ್ಕೆ ಅಟ್ಟುವ ಸಧ್ಯದ ಕಾಲಘಟ್ಟದಲ್ಲಿ ಎಷ್ಟೋ ವರ್ಷಗಳ ಹಿಂದೆ ವಿದ್ಯಾದಾನ ಮಾಡಿದ ಗುರುಗಳಿಗೆ ವಂದಿಸುವ ಕಾರ್ಯ ಮೆಚ್ಚುವಂಥದ್ದು. ಇಂತಹ ಆದರ್ಶ ಕಾರ್ಯಕ್ರಮಗಳು ಮೇಲಿಂದ ಮೇಲೆ ನಡೆಯುತ್ತಿರಬೇಕು"



– ಡಾ.ಚನ್ನವೀರ ಸ್ವಾಮೀಜಿ
ಕುಂಟೋಜಿ ಸಂಸ್ಥಾನ ಹಿರೇಮಠ

ಬಸ್ ಗ್ಯಾರೇಜ್ ನಲ್ಲಿ ಭೀಕರ ಅಗ್ನಿ ದುರಂತ | ಇದ್ದ 35 ಬಸ್‌ಗಳಲ್ಲಿ 20ಕ್ಕೂ ಅಧಿಕ ಬಸ್‌ಗಳಿಗೆ ಹಾನಿ

# ಅಗ್ನಿ ಅವಘಡ: ಸುಟ್ಟು ಕರಕಲಾದ 19 ಬಸ್‌ಗಳು

ಬೆಂಗಳೂರು: ಮಹಾನಗರದ ಬಸ್ ಗ್ಯಾರೇಜ್ ನಲ್ಲಿ ಸೋಮವಾರ ಸಂಭವಿಸಿದ ಭೀಕರ ಅಗ್ನಿ ದುರಂತದಲ್ಲಿ 19 ಬಸ್ ಗಳು ಬೆಂಕಿಗಾಹುತಿಯಾಗಿದ್ದು, ಘಟನಾ ಸ್ಥಳಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಮತ್ತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬೆಂಗಳೂರಿನ ಹೊಸಕೆರೆಹಳ್ಳಿಯ ವೀರಭದ್ರನಗರದ ಸಮೀಪದಲ್ಲಿರುವ ಎಸ್.ವಿ ಕೋಚ್ ಬಸ್ ಬಾಡಿಬಿಲ್ಡರ್ಸ್ ಮತ್ತು ಗ್ಯಾರೇಜ್ ನಲ್ಲಿ ಸೋಮವಾರ ಬೆಳಗ್ಗೆ ಭಾರೀ ಬೆಂಕಿ ಕಾಣಿಸಿಕೊಂಡು ನಿಂತಿದ್ದ 19ಕ್ಕೂ ಹೆಚ್ಚು ಬಸ್‌ಗಳು ಸುಟ್ಟು ಕರಕಲಾಗಿವೆ. ಗ್ಯಾರೇಜ್‌ನಲ್ಲಿ ನಿಂತಿದ್ದ ಬಸ್ ಒಂದರ ಭಾಗಕ್ಕೆ ವೆಲ್ಡಿಂಗ್ ಕೆಲಸ ಮಾಡುತ್ತಿದ್ದಾಗ ಬೆಂಕಿ ಕಾಣಿಸಿಕೊಂಡಿದೆ ಎನ್ನಲಾಗಿದೆ.

ಪ್ರಾಥಮಿಕ ತನಿಖೆಯ ಪ್ರಕಾರ, ವೆಲ್ಡಿಂಗ್ ಯಂತ್ರದಿಂದ ಕಿಡಿ ಹಾರಿದ್ದು ಇದು ಬೆಂಕಿ ಅವಘಡಕ್ಕೆ ಕಾರಣವಾಯಿತು. ಬಳಿಕ ಒಂದರನಂತರ ಒಂದು ಬಸ್ ಗೆ ಬೆಂಕಿ ವ್ಯಾಪಿಸಿದೆ ಎಂದು ನಾವು ಶಂಕಿಸಿದ್ದೇವೆ. ಬೆಂಕಿ ನಂತರ ಗ್ಯಾರೇಜ್‌ನಲ್ಲಿ ನಿಲ್ಲಿಸಲಾಗಿದ್ದ ಇತರ ಬಸ್‌ಗಳಿಗೆ ಹರಡಿ ಭಾರೀ ಹಾನಿಯನ್ನುಂಟುಮಾಡಿತು" ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬೆಂಕಿಯನ್ನು ನಂದಿಸಲು ಹಲವಾರು ಅಗ್ನಿಶಾಮಕ ವಾಹನಗಳನ್ನು ಸೇವೆಗೆ ನಿಯೋಜಿಸಲಾಗಿತ್ತು. ಸುಮಾರು 19 ಬಸ್‌ಗಳು ಸಂಪೂರ್ಣವಾಗಿ ಸುಟ್ಟುಹೋಗಿವೆ ಮತ್ತು ನಾಲ್ಕು ಭಾಗಶಃ ಹಾನಿಗೊಳಗಾಗಿವೆ. ಗ್ಯಾರೇಜ್‌ನಲ್ಲಿ 35 ಬಸ್‌ಗಳಿದ್ದವು. ಈ ಪೈಕಿ 20ಕ್ಕೂ ಹೆಚ್ಚು ಬಸ್‌ಗಳಿಗೆ ಬೆಂಕಿ ಹೊತ್ತಿಕೊಂಡಿದೆ. ಗ್ಯಾರೇಜ್ ಅನ್ನು ತೆರೆದ ಜಾಗದಲ್ಲಿ ಇರಿಸಲಾಗಿದ್ದರಿಂದ ಬೆಂಕಿ ಕಾಣಿಸಿಕೊಂಡಾಗ ಅದರಲ್ಲಿದ್ದ ಜನರು ಬೇಗನೆ ಹೊರಬರಲು ಸಾಧ್ಯವಾಯಿತು. ಇದರಿಂದ ಯಾವುದೇ ರೀತಿಯ ಪ್ರಾಣಾಪಾಯವಾಗಿಲ್ಲ. ಬೆಂಕಿಯಲ್ಲಿ ಯಾರೂ ಗಾಯಗೊಂಡಿಲ್ಲ. ಬೆಂಕಿಯ ನಿಖರವಾದ ಕಾರಣವನ್ನು ತನಿಖೆ ಮಾಡಲು ವಿವರವಾದ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.



## ಡಿಸಿಎಂ ಡಿಕೆಶಿವಕುಮಾರ, ಸಚಿವ ರಾಮಲಿಂಗಾರೆಡ್ಡಿ ಭೇಟಿ

ಅಗ್ನಿದುರಂತ ನಡೆದ ಗ್ಯಾರೇಜ್ ಗೆ ಸೋಮವಾರ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಳಿಕ ಅಧಿಕಾರಿಗಳೊಂದಿಗೆ ಘಟನೆಯ ಕುರಿತು ವಿವರ ಪಡೆದು, ಬಸ್ ಮಾಲೀಕರೊಂದಿಗೆ ನಷ್ಟದ ಕುರಿತು ಮಾಹಿತಿ ಪಡೆದರು.






### ರಾಜ ನುಡಿ

ಸುದೀರ್ಘ ಪಯಣದಲ್ಲಿ ಒಂದು ಹುಲ್ಲು ಕಡ್ಡಿಯೂ ಭಾರವಾಗುತ್ತದೆ. ಹೀಗಿರುವಾಗ ಜೀವನದ ಪಯಣದಲ್ಲಿ ಅತೀ ಭಾರವಾದದ್ದು 'ಅಹಂ'. ಅತ್ಯಂತ ಭಾರವಾದದ್ದು 'ಕಣ್ಣೀರು'. ಇವೆರಡನ್ನೂ ಹೊತ್ತು ಚಲಿಸಬಾರದು. ಕಳಚಿ ಬಿಡಿ.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ 223

*ಸೃಷ್ಟಿ: ಅಲ್ಲಮರ ವೈಜ್ಞಾನಿಕ ಅನುಭಾವ*

*ಆದಿ ಅನಾದಿ ಒಂದಾದಂದು,*
*ಚಂದ್ರಸೂರ್ಯರೊಂದಾದಂದು,*
*ಧರೆ ಆಕಾಶ ಒಂದಾದಂದು;*
*ಗುಹೇಶ್ವರಲಿಂಗನು ನಿರಾಳನು.*

*– ಅಲ್ಲಮಪ್ರಭುಗಳು*

ಸೃಷ್ಟಿಯ ಉಗಮದ ಪೂರ್ವದಲ್ಲಿ ಎಲ್ಲ ಆಕಾಶಕಾಯಗಳು ಒಂದೇ ಮೂಲಪರಮಾಣುವಿನಲ್ಲಿ ಅಡಗಿದ್ದವು ಎಂಬುದನ್ನು ವಿಜ್ಞಾನಿಗಳು ನಂಬಲು ಕಾರಣವೆನೆಂದರೆ, ಅಂದು ಮಹಾಸ್ಫೋಟ(ಬಿಗ್ ಬ್ಯಾಂಗ್) ಸಂಭವಿಸಿದಾಗ ಸಿಡಿದ ಎಲ್ಲ ವ್ಯೋಮಪದಾರ್ಥಗಳು ಇಂದಿಗೂ ಗ್ಯಾಲಾಕ್ಷಿ-ಗ್ಯಾಲಾಕ್ಷಿಗಳು ಹಾಗೂ ನಕ್ಷತ್ರಗಳು ಪರಸ್ಪರ ದೂರ ಸರಿಯುತ್ತಿವೆ. ಈ ಆಕಾಶಕಾಯಗಳು ಕಾಲಕ್ಕೆ ಅನುಗುಣವಾಗಿ ಪರಸ್ಪರ ದೂರ ಸರಿಯುವಿಕೆಯನ್ನು ಹಿಮ್ಮುಖವಾಗಿ ಗಣನೆಗೆ ತೆಗೆದುಕೊಂಡರೆ ಸುಮಾರು 13 ಬಿಲಿಯನ್ ವರ್ಷಗಳ ಹಿಂದೆ ಎಲ್ಲವೂ ಒಂದೇ ಪರಮಾಣುವಿನಲ್ಲಿ ಅಡಗಿದ್ದು ಸ್ಫೋಟಗೊಂಡಿವೆ ಎಂಬ ನಿರ್ಣಯಕ್ಕೆ ಬರಲಾಗಿದೆ. ಆದರೆ ಇದೇ ಭಾವವನ್ನು ಮೇಲಿನ ವಚನದಲ್ಲಿ ಅಲ್ಲಮಪ್ರಭುಗಳು ಸ್ಪಷ್ಟವಾಗಿ ಆದಿ ಅನಾದಿ ಒಂದಾದಂದು, ಚಂದ್ರಸೂರ್ಯರೊಂದಾದಂದು, ಧರೆ ಆಕಾಶ ಒಂದಾದಂದು ಎಂದು ಹೇಳುವುದರ ಮುಖಾಂತರ ಅವರಿಗೆ ಈ ಮಹಾಸ್ಫೋಟದಿಂದಲೇ ಈ ಸೃಷ್ಟಿಯ ಉಗಮವಾಗಿದೆ ಎಂಬುದರ ಬಗ್ಗೆ ಅರಿವಿತ್ತು ಎಂಬುದು ಗೋಚರವಾಗುತ್ತದೆ. ಅಲ್ಲದೇ ಈ ಮಹಾಸ್ಫೋಟದ ಹಿಂದಿನ ಶಕ್ತಿಯ ಬಗ್ಗೆ ವಿಜ್ಞಾನಿಗಳಿಗೆ ಇನ್ನೂ ಸ್ಪಷ್ಟತೆ ಇಲ್ಲ ಆದರೆ ಅದನ್ನು ಅಲ್ಲಮರು ಗುಹೇಶ್ವರಲಿಂಗನು ನಿರಾಳನು ಎನ್ನುವುದರ ಮೂಲಕ ಶಕ್ತಿ ಚೈತನ್ಯವೇ ಗುಹೇಶ್ವರ ಎಂದು ದೇವರ ನೈಜ ಅಸ್ತಿತ್ವವನ್ನು ನಮ್ಮೆದುರಿಗೆ ಬಿಚ್ಚಿಟ್ಟಿದ್ದಾರೆ. ಅಲ್ಲಮರ ವೈಜ್ಞಾನಿಕ ಅನುಭಾವಕ್ಕೆ ಶರಣು ಶರಣಾರ್ಥಿಗಳು.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

ಕರ್ನಾಟಕಕ್ಕೆ ಮುಂದುವರಿದ ಸಂಕಷ್ಟ | ನಿತ್ಯ 2,600 ಕ್ಯೂಸೆಕ್ ನೀರು ಬಿಡುವಂತೆ ಆದೇಶ

# ತಮಿಳುನಾಡಿಗೆ ನ.1ರಿಂದ ಮತ್ತೆ ನೀರು

**ಉದಯರಶ್ಮಿ ನ್ಯೂಸ್**

ಬೆಂಗಳೂರು: ಕರ್ನಾಟಕ ಸರ್ಕಾರವು ತಮಿಳುನಾಡಿಗೆ ನ.1ರಿಂದ 15ರವರೆಗೆ ಪ್ರತಿದಿನ 2,600 ಕ್ಯೂಸೆಕ್ ಕಾವೇರಿ ನೀರನ್ನು ಹರಿಸಬೇಕು ಎಂದು ಕಾವೇರಿ ನೀರು ನಿಯಂತ್ರಣ ಸಮಿತಿ ಶಿಫಾರಸು ಮಾಡಿದೆ.

ದೆಹಲಿಯಲ್ಲಿ ನಡೆದ ಸಮಿತಿಯ ಸಭೆಯಲ್ಲಿ ಈ ಆದೇಶವನ್ನು ನೀಡಲಾಗಿದೆ. ಸಮಿತಿಯ ಶಿಫಾರಸಿನಿಂದ ರಾಜ್ಯಕ್ಕೆ ಮತ್ತೊಮ್ಮೆ ಹಿನ್ನಡೆಯಾಗಿದೆ.

ದೆಹಲಿಯಲ್ಲಿ ನಡೆದ ಸಮಿತಿಯ ಸಭೆಯಲ್ಲಿ ಕರ್ನಾಟಕ ಹಾಗೂ ತಮಿಳುನಾಡಿನ ಜಲಸಂಪನ್ಮೂಲ ಇಲಾಖೆಗಳ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

ಕಾವೇರಿ ನದಿ ನೀರು ಹಂಚಿಕೆ ವಿವಾದ ಬಗೆಹರಿಸಲು ಸುಪ್ರೀಂ ಕೋರ್ಟ್ ಆದೇಶದಂತೆ ರಚಿಸಲಾದ ಕಾವೇರಿ ನೀರು ನಿಯಂತ್ರಣಾ ಸಮಿತಿ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಪ್ರತಿ 15 ದಿನಗಳಿಗೊಮ್ಮೆ ಸಭೆಯನ್ನು ನಡೆಸಿ ನೀರು ಬಿಡುವ ವಿಚಾರಕ್ಕೆ ಕರ್ನಾಟಕಕ್ಕೆ ಆದೇಶ ನೀಡುತ್ತಿದೆ. ಈ ಹಿಂದೆ ಅಕ್ಟೋಬರ್ 15ರಿಂದ 31ರ ವರೆಗೆ ಪ್ರತಿದಿನ 3 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಪ್ರಾಧಿಕಾರ ಆದೇಶ ಹೊರಡಿಸಿತ್ತು.



ಅದಕ್ಕೂ ಮೊದಲು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ 15 ದಿನ ಪ್ರತಿದಿನ 5 ಸಾವಿರ ಕ್ಯೂಸೆಕ್ ನೀರನ್ನು ತಮಿಳುನಾಡಿಗೆ ಹರಿಸುವಂತೆ ಕರ್ನಾಟಕ ಸರ್ಕಾರಕ್ಕೆ ಸೂಚನೆ ನೀಡಿತ್ತು. ಇದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಮೊರೆ ಹೋಗಲಾಗಿತ್ತು. ಸುಪ್ರೀಂಕೋರ್ಟ್‌ನಲ್ಲೂ ಕರ್ನಾಟಕಕ್ಕೆ ಹಿನ್ನಡೆಯಾಗಿತ್ತು.

ಇದಲ್ಲದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ದೆಹಲಿಯಲ್ಲಿ ಕರ್ನಾಟಕದ ಸಂಸದರು ಮತ್ತು ಸಚಿವರ ಜೊತೆ ಸಭೆ ನಡೆಸಿದ್ದರು. ಜೊತೆಗೆ ಕೇಂದ್ರ ಜಲಶಕ್ತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರನ್ನು ಭೇಟಿ ಮಾಡಿ ಪರಿಸ್ಥಿತಿಯನ್ನು ವಿವರಿಸಿದ್ದರು.

ಇಂಡಿ ಮತಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ–ಉದ್ಘಾಟನೆ

# ಡಾ.ಅಂಬೇಡ್ಕರ್ ಮಾನವ ಕುಲಕ್ಕೆ ಆದರ್ಶ :ಸಚಿವ ಜಾರಕಿಹೊಳಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಡಾ.ಬಿ.ಆರ್. ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ ಕೇವಲ ಒಂದು ಜಾತಿ, ಸಮುದಾಯಕ್ಕೆ ಸೀಮಿತವಾಗಿಲ್ಲ ಇಡೀ ಮಾನವ ಕುಲಕ್ಕೆ ಸೀಮಿತವಾದ ಸಂವಿಧಾನ ಸಾಮಾಜಿಕ, ರಾಜಕೀಯ ಆರ್ಥಿಕ, ಶೈಕ್ಷಣಿಕವಾಗಿ ಬೆಳೆಯಲು ಸಾಧ್ಯವಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಸೋಮವಾರ ಜಿಲ್ಲೆಯ ಇಂಡಿ ತಾಲೂಕಿನ ಹಳಗುಣಕಿ ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಎಚ್.ಸಿ.ಮಹದೇವಪ್ಪ ಅವರೊಂದಿಗೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅಡಿಗಲ್ಲು ಮತ್ತು ಉದ್ಘಾಟನೆ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ಅನಾವರಣಗೊಳಿಸಿ ಅವರು ಮಾತನಾಡಿದರು.

ವಿಶ್ವಕಂಡ ಅಪರೂಪದ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆ ಅನಾವರಣ ಮಾಡಿದೆ. ಪ್ರತಿಮೆ ಅನಾವರಣಕ್ಕೆ ಮಾತ್ರ ಸೀಮೀತವಾಗದೇ ಅವರ ಹೋರಾಟ, ತ್ಯಾಗ ಪ್ರತಿದಿನ ಸ್ಮರಣೆಯಾಗಬೇಕು. ಅವರು ನೀಡಿದ ಸಂವಿಧಾನದ ಕೊಡುಗೆ ಅಪಾರವಾಗಿದ್ದು, ಡಾ.ಬಿ.ಆರ್.ಅಂಬೇಡ್ಕರ್ ಅವರ ತ್ಯಾಗ ನಮಗೆ ಸ್ಫೂರ್ತಿದಾಯಕ ಹಾಗೂ ಅವರ ಆದರ್ಶಗಳು ನಮಗೆ ದಾರಿದೀಪವಾಗಿವೆ ಎಂದು ಹೇಳಿದರು.



ಕಳೆದ ಬಾರಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಸರ್ಕಾರದ ಸಂದರ್ಭದಲ್ಲಿ ಶಾಸಕ ಯಶವಂತರಾಯಗೌಡ ಪಾಟೀಲ ಅವರ ನೇತೃತ್ವದಲ್ಲಿ ಈ ಭಾಗದಲ್ಲಿ ರಸ್ತೆ, ವಸತಿ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗಿದೆ. ಇನ್ನೂ ಸಹ ಈ ಭಾಗದಲ್ಲಿ ಅಭಿವೃದ್ಧಿ ಕೆಲಸಗಳು ಆಗಬೇಕಾಗಿದೆ. ಆರ್ಥಿಕ-ಸ್ಥಿತಿಗತಿಗಳನ್ನು ನೋಡಿಕೊಂಡು ನಮ್ಮ ಸರ್ಕಾರದ ಅವಧಿಯಲ್ಲಿ ಎಲ್ಲ ಕಾಮಗಾರಿಗಳನ್ನು ಪೂರ್ಣಗೊಳಿಸಿ ಸಂಪೂರ್ಣ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು. ಅಭಿವೃದ್ಧಿ ಕಾಮಗಾರಿಗಳಿಗೆ ಯಾವುದೇ ಅನುದಾನದ ಕೊರತೆಯಿಲ್ಲ. ಗ್ಯಾರಂಟಿ ಯೋಜನೆಗಳು ಜನಪರ ಯೋಜನೆಗಳಾಗಿದ್ದು, ಈ ಯೋಜನೆಗಳಿಂದ ಯಾವುದೇ ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗಿಲ್ಲ ಎಂದು ಅವರು ಹೇಳಿದರು.

ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅವರು ಮಾತನಾಡಿ, ವಿಜಯಪುರ ಜಿಲ್ಲೆ ಐತಿಹಾಸಿಕ ಚರಿತ್ರೆವುಳ್ಳ ಜಿಲ್ಲೆಯಾಗಿದೆ. 12ನೇ ಶತಮಾನದ ಬಸವಾದಿ ಶರಣರು ಕಾಯಕ ತತ್ವವನ್ನು ಅಳವಡಿಸಿಕೊಂಡು ಬಂದಿದ್ದು, ಅಸಮಾನತೆಯನ್ನು ತೊಡೆದು ಹಾಕಿ ಸಮಾನತೆಯ ಸಮಾಜ ನಿರ್ಮಾಣ ಮಾಡಿ ಸಂವಿಧಾನದ ಆಶಯದಂತೆ ಸಮಾನ ಸಮಾಜಕ್ಕೆ ನಮ್ಮ ಸರ್ಕಾರ ಶ್ರಮಿಸುತ್ತ, ಹಲವು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಸರ್ಕಾರ ಜಾರಿಗೊಳಿಸಿದ ಶಕ್ತಿ ಯೋಜನೆ, ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಯುವನಿಧಿ ಜನಪರ ಯೋಜನೆಗಳಿಂದ ಬಡ ಹಾಗೂ ಮಧ್ಯಮ ವರ್ಗದವರಿಗೆ ಅನುಕೂಲ ಕಲ್ಪಿಸಿವೆ. ಸ್ವತಂತ್ರವಾಗಿ ಬದುಕುಲು ಹಾಗೂ ಸ್ವಾಭಿಮಾನ ಬದುಕು ಕಟ್ಟಿಕೊಡಲು ಅವಕಾಶ ಕಲ್ಪಿಸಿದೆ. ಈ ಯೋಜನೆಯಿಂದ ಕೋಟ್ಯಾಂತರ ಕುಟುಂಬಗಳಿಗೆ ಆಸರೆ ದೊರೆತಿದ್ದು, ನಮ್ಮ ಸರ್ಕಾರ ನುಡಿದಂತೆ ನಡೆಯುತ್ತಿದೆ ಎಂದು ಅವರು ಹೇಳಿದರು.

## ಇಂಡಿ ಭಾಗದ ಅಭಿವೃದ್ಧಿಗೆ ಕ್ರಮ

ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಅವರು ಮಾತನಾಡಿ, ಇಂಡಿ ವಿಧಾನಸಭಾ ಕ್ಷೇತ್ರದ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ, ಲೋಕೋಪಯೋಗಿ ಇಲಾಖೆಯಿಂದ ಸರಕಾರಿ ಪದವಿಪುರ್ವ ಕಾಲೇಜ್ ಇಂಡಿ ಕಟ್ಟಡ ನಿರ್ಮಾಣ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಜಲಧಾರೆ ಜಲಜೀವನ ಮಿಶನ್ ಯೋಜನೆಯ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ, ವಿಜಯಪುರ, ಇಂಡಿ ತಾಲುಕು 702 ಗ್ರಾಮೀಣ ಜನ ವಸತಿಗಳು ಹಾಗೂ 5 ಪಟ್ಟಣ ಪಂಚಾಯತಿಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಯೋಜನೆಯಡಿಯಲ್ಲಿ ಇಂಡಿ ಮತಕ್ಷೇತ್ರದ 143 ಜನವಸತಿಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಾಮಗಾರಿ, ಜಲಜೀವನ ಮಿಷನ್ ಯೋಜನೆಯಡಿ ಇಂಡಿ ಮತಕ್ಷೇತ್ರದ 143 ಜನವಸತಿಗಳಿಗೆ ಕೈಗೊಳ್ಳಲಾದ ವಿವಿಧ ಹಂತದಲ್ಲಿರುವ ಕಾಮಗಾರಿಗಳು, ಇಂಧನ ಕೆಪಿಟಿಸಿಎಲ್ ಇಲಾಖೆಗಳ ನಿಂಬಾಳ ಕೆ.ಡಿ. ಗ್ರಾಮದಲ್ಲಿ 110 ಕೆವ್ಹಿ ವಿದ್ಯುತ್ ವಿತರಣಾ ಕೇಂದ್ರ ನಿರ್ಮಾಣ ಹಾಗೂ ಗ್ರಾಮೀಣ ಅಭಿರ್ವದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇಂಡಿ ಮತಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಸಿ.ಸಿ. ರಸ್ತೆ ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅಡಿಗಲ್ಲು ಸಮಾರಂಭ ನೆರವೇರಿಸುವ ಮೂಲಕ ಈ ಭಾಗದಲ್ಲಿ ಅಭಿವೃದ್ದಿಗೆ ಕ್ರಮ ವಹಿಸಲಾಗಿದೆ ಎಂದು ಹೇಳಿದರು

ತಾಲೂಕಿನ ಮಿನಿ ವಿಧಾನಸೌಧ, ಲಿಂಬೆ ಅಭಿವೃದ್ಧಿ ಮಂಡಳಿ, ಲಿಂಬೆ ಬೆಳೆ ಜಿಐ ಟ್ಯಾಗ್ ದೊರೆತಿದೆ. ಇದರಿಂದ ಬೆಳೆಗಾರರಿಗೆ ಪ್ರೊತ್ಸಾಹ ದೊರೆಯುವುದರಿಂದ ಆರ್ಥಿಕ ಸಬಲತೆಗೆ ಅವಕಾಶ ಕಲ್ಪಿಸಿದೆ. ತಾಲೂಕಿನಲ್ಲಿ ಮೇಗಾ ಮಾರುಕಟ್ಟೆ ನಿರ್ಮಾಣದಿಂದ 400 ಕುಟುಂಬಗಳಿಗೆ ಆಸರೆ ದೊರೆಯಲಿದೆ ಎಂದು ಹೇಳಿದರು.

ನಾಗಪುರದ ನಾಗಬೋಧಿಜಿ ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದರು. ಈ ಸಂದರ್ಭದಲ್ಲಿ ನಾಗಠಾಣ ಶಾಸಕರಾದ ವಿಠಲ್ ಕಟಕಧೊಂಡ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ, ಇಂಡಿ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪುಂಡಲೀಕ ಮಾನವರ, ಇಂಡಿ ತಹಶೀಲ್ದಾರರಾದ ವಿಜಯಕುಮಾರ ಕಡಕಬಾವಿ ಸೇರಿದಂತೆ ವಿವಿಧ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ವೃಕ್ಷೋತ್ಥಾನ ಹೆರಿಟೇಜ್ ರನ್: ಪೂರ್ವ ಸಿದ್ಧತೆ ಸಭೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ಪರಿಸರ ಸಂರಕ್ಷಣೆ ಮತ್ತು ಪ್ರಾಚೀನ ಸ್ಮಾರಕಗಳ ಸಂರಕ್ಷಣೆ ಉದ್ದೇಶದಿಂದ ಡಿಸೆಂಬರ್ 24 ರಂದು ನಗರದಲ್ಲಿ ಆಯೋಜಿಸಲಾಗಿರುವ ವೃಕ್ಷೋತ್ಥಾನ್ ಹೆರಿಟೇಜ್ ರನ್–2023 ಪೂರ್ವ ಸಿದ್ಧತೆಗಳ ಕುರಿತು ಕೋರ್ ಕಮಿಟಿ ಸಭೆ ಶನಿವಾರ ಸಂಜೆ ನಡೆಯಿತು.

ಡಾ. ಮಹಾಂತೇಶ ಬಿರಾದಾರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಪಾಲ್ಗೊಂಡ ಕೋರ್ ಕಮಿಟಿಯ ನಾನಾ ಉಪಸಮಿತಿಗಳ ಪ್ರಮುಖರು, ಈವರೆಗೆ ಕೈಗೊಳ್ಳಲಾಗಿರುವ ಕ್ರಮಗಳ ಕುರಿತು ಮಾಹಿತಿ ನೀಡಿದರು.

ರೂಟ್ ಕಮಿಟಿ ಉಸ್ತುವಾರಿ ಸೋಮಶೇಖರ ಸ್ವಾಮಿ ಮತ್ತು ಸಂತೋಷ ಅವರಸಂಗ ಮಾತನಾಡಿ, ಈ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲಿರುವ ಓಟಗಾರರಿಗೆ ಚೇತೋಹಾರಿ ಪಾನೀಯ(ಎನರ್ಜೆಲ್) ನೀಡಲು ಎಫ್.ಡಿ.ಸಿ ಕಂಪನಿ ಮುಂದೆ ಬಂದಿದೆ. ಏಳು ಹೈಡ್ರೆಶನ್ ಪಾಯಿಂಟ್ಸ್ ಗಳಲ್ಲಿ ಈ ಕಂಪನಿಯ ಸದಸ್ಯರು ಓಟಗಾರರಿಗೆ ಚೇತೋಹಾರಿ ಪಾನೀಯ ವ್ಯವಸ್ಥೆ ಮಾಡಲಿದ್ದಾರೆ. ಒಟ್ಟು ಏಳು ವಿಭಾಗಗಳಲ್ಲಿ ಈ ಓಟ ನಡೆಯಲಿದ್ದು, 21 ಕಿ. ಮೀ., 10 ಕಿ. ಮೀ., 5 ಕಿ. ಮೀ, 3.50 ಕಿ.ಮೀ., ಹಿರಿಯ ನಾಗರಿಕರು, ವಿಕಲಚೇತನರು ಹಾಗೂ ಮಕ್ಕಳ ವಿಭಾಗದಲ್ಲಿ ಈ ಓಟ ನಡೆಯಲಿದೆ. ಇದಕ್ಕಾಗಿ ರೂಟ್ ಕಮಿಟಿಯವರು ಈಗಾಗಲೇ ಓಟಗಾರರು ಸಾಗಬೇಕಿರುವ ಮಾರ್ಗಗಳಲ್ಲಿ ಖುದ್ದಾಗಿ ಸಂಚರಿಸಿ ಸಿದ್ಧತೆಗಳನ್ನು ಮತ್ತು ಮಾರ್ಗಗಳನ್ನು ಗುರುತಿಸಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಂಚಾಲಕ ಮುರುಗೇಶ ಪಟ್ಟಣಶೆಟ್ಟಿ ಮಾತನಾಡಿ, ಈ ಓಟದಲ್ಲಿ ಪಾಲ್ಗೊಳ್ಳಲಿರುವ ಕ್ರೀಡಾಪಟುಗಳ ನೋಂದಣಿ ಈಗಾಗಲೇ ಪ್ರಾರಂಭವಾಗಿದ್ದು, ಉತ್ಯುತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಆನಲೈನ್ ಮೂಲಕ ನಡೆಯುತ್ತಿರುವ ಈ ನೋಂದಣಿಯು ಕುರಿತು ಈಗಾಗಲೇ ನಾನಾ ಕಾಲೇಜುಗಳು, ವೃತ್ತಿಪರ ಓಟಗಾರರು ಸೇರಿದಂತೆ ಹಲವಾರು ಸಂಘ– ಸಂಸ್ಥೆಗಳನ್ನು ಸ್ವಯಂ ಪ್ರೇರಿತರಾಗಿ ಪಾಲ್ಗೊಳ್ಳಲು ಮುಂದೆ ಬಂದಿದ್ದಾರೆ ಎಂದು ಮಾಹಿತಿ ನೀಡಿದರು.

ಡಾ. ಮಹಾಂತೇಶ ಬಿರಾದಾರ ಮಾತನಾಡಿ, ವೃಕ್ಷೋತ್ಥಾನ್ ಹೆರಿಟೇಜ್ ರನ್– 2023ನ್ನು ಅಚ್ಚುಕಟ್ಟಾಗಿ ಮತ್ತು ಇತತರಿಗೆ ಮಾದರಿಯಾಗುವಂತೆ ಸಂಘಟಿಸುವ ಕುರಿತು ಸಲಹೆ, ಸೂಚನೆ ನೀಡಿದರು.

ಮಾಧ್ಯಮಗಳು ಸಹಕಾರ ಪಡೆದು ಸಾಮಾಜಿಕ ಜಾಲತಾಣಗಳನ್ನು ಸಮರ್ಪಕವಾಗಿ ಬಳಸಿಕೊಂಡು ಈ ಕಾರ್ಯಕ್ರಮದ ಬಗ್ಗೆ ಹೆಚ್ಚೆಚ್ಚು ಪ್ರಚಾರ ನೀಡಬೇಕು. ಇದರಿಂದ ಕರ್ನಾಟಕವಷ್ಟೇ ಅಲ್ಲ, ನೆರೆಯ ರಾಜ್ಯಗಳಿಂದಲೂ ಆಸಕ್ತ ಓಟಗಾರರು ಪಾಲ್ಗೊಳ್ಳಲು ಸಹಾಯವಾಗಲಿದೆ. ಅಲ್ಲದೇ, ಓಟಗಾರರು ಓಡುವ ಮಾರ್ಗಗಳ ಪ್ರಮುಖ ಸ್ಥಳಗಳಲ್ಲಿ ಸಾಂಸ್ಕೃತಿಕ ಕಲಾ ತಂಡಗಳು ಉಪಸ್ಥಿತ–ರಿದ್ದು ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಲಿವೆ. ಸ್ವಯಂ ಸೇವಕರೂ ಕೂಡ ಕಾರ್ಯಕ್ರಮ ನಿಗದಿಯ ಎರಡು ದಿನ ಮುಂಚಿತವಾಗಿಯೇ ಅವರಿಗೆ ವಹಿಸಲಾಗುವ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸುವುದರಿಂದ ಈ ಓಟದ ಯಶಸ್ಸಿಗೆ ಪೂರಕವಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಾನಾ ಸಮಿತಿಯ ಉಸ್ತುವಾರಿಗಳಾದ ಆಕಾಶ ಚೌಕಿಮಠ, ಪ್ರದೀಪ ಕುಂಬಾರ, ನಾವೇದ ನಾಗಠಾಣ, ವೀಣಾ ದೇಶಪಾಂಡೆ, ಶಿವನಗೌಡ ಪಾಟೀಲ, ಸಂದೀಪ, ದಿಲೀಪ್ ಗೌಡ ಪಾಟೀಲ, ಅನಿಲ ಧಾರವಾಡಕರ, ಶ್ರೀಕಾಂತ್ ಮಂತ್ರಿ, ಮಹೇಶ ವಿ.ಶಟಗಾರ ಜಗದೀಶ ಪಾಟೀಲ, ಸೋಮಶೇಖರ ಹಿರೆಕುರುಬರ ಮುಂತಾದವರು ಉಪಸ್ಥಿತರಿದ್ದರು.

# ರಾಣಾ ಪ್ರತಾಪಸಿಂಹ ಸಂಘದ ಪದಾಧಿಕಾರಿಗಳಿಗೆ ಸನ್ಮಾನ

**ಉದಯರಶ್ಮಿ ನ್ಯೂಸ್**




ವಿಜಯಪುರ: ವಾರ್ಡ್ ನಂ. 16ರಲ್ಲಿ ಜಿಲ್ಲೆಯ ವೀರ ಮಹಾರಾಣಾ ಪ್ರತಾಪ್ ಸಿಂಹ ಸೇವಾ ಅಭಿವೃದ್ಧಿ ಸಂಘದ ಪದಾಧಿಕಾರಿಗಳಿಗೆ ಸನ್ಮಾನ ಜರುಗಿತು.

ಜಿಲ್ಲಾ ರಜಪೂತ್ ಸಮಾಜದ ಅಧ್ಯಕ್ಷ ಪರಶುರಾಮ್ ಸಿಂಗ್ ರಜಪೂತ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ಸಿದ್ದು ಸಿಂಗ್ ರಜಪುತ್, ದತ್ತು ಸಿಂಗ್ ರಜಪೂತ, ಮೋಹನ್ ಸಿಂಗ್ ರಜಪೂತ, ಪ್ರಕಾಶ್ ರಜಪೂತ, ಕಾರ್ಯದರ್ಶಿಗಳಾದ ರಮೇಶ್ ಸಿಂಗ್ ಹಜೇರಿ ಹಾಗೂ ಪುಂಡಲಿಕ್ ರಜಪೂತ, ಸಂತೋಷ್ ತೇಲಿ, ಸುನಿಲ್ ಸಿಂಗ್ ಸದಿವಾಲೆ, ಪ್ರತಾಪ್ ಸಿಂಗ್ ಹಜೇರಿ, ದುಂಡಿ ಸಿಂಗ್ ಹಜೇರಿ, ಮನೋಹರ್ ಸಿಂಗ್ ರಜಪೂತ, ಅಂಬಾಭವಾನಿ ದೇವಸ್ಥಾನದ ಅರ್ಚಕರು ಹಾಗೂ ಗುಲಾಬ್ ಚೌಹಾನ್, ರವಿ ಚೌಹಾನ್, ನಬಿ ಬಿಜಾಪುರ್, ರಾಜು ಸಿಂಗ್ ರಜಪೂತ, ಕೆ ಎಸ್ ಟಿ ಸಂಘದ ಅಧ್ಯಕ್ಷ ಶಿವಾನಂದ್ ಹಿರೇಕುರುಬರ, ರಾಣಿ ಚೆನ್ನಮ್ಮ ಸಂಘದ ಅಧ್ಯಕ್ಷ ಚನ್ನು ಬೆಳೇಗಾವ್, ಬಸವರಾಜ ದೊಡ್ಡಮನಿ, ಸಂತೋಷ್ ರಜಪೂತ, ಇಂದಿರಾಬಾಯಿ ರಜಪೂತ, ಜಯಶ್ರೀ ರಜಪೂತ, ಲಕ್ಷ್ಮಿ ರೈಚೂರ್, ಸವಿತಾ ಚೌಹಾನ್ ಸೇರಿದಂತೆ ಇನ್ನು ಹಲವರು ಭಾಗಿಯಾಗಿದ್ದರು

ಈ ಸಮಯ ಜಿಲ್ಲಾ ರಜಪೂತ ಸಮಾಜದ ಅಧ್ಯಕ್ಷ ಪರಶುರಾಮ್ ಸಿಂಗ್ ರಜಪೂತ್ ಮಾತನಾಡಿ, ಸಮಾಜವೆಂದರೆ ಪ್ರತಿಯೊಂದು ಸಮಾಜದ ವ್ಯಕ್ತಿಯನ್ನು ಕುಂದು ಕೊರತೆಗಳನ್ನು ಆಲಿಸುತ್ತಾ ಪರಸ್ಪರ ಹೊಂದಾಣಿಕೆಯಿಂದ ಹಾಗೂ ಸಮಾಜದ ಅಭಿವೃದ್ಧಿಗಾಗಿ ಸರ್ವರೂ ಶ್ರಮಿಸಿದರೆ ಸಮಾಜ ಹೆಮ್ಮರವಾಗಿ ಬೆಳೆಯುತ್ತದೆ ಎಂದು ಹೇಳಿದರು.

ವಿವಿಧೆಡೆ ಸಮಾಜದಲ್ಲಿ ಶೋಷಣೆ, ಬಹಿಷ್ಕಾರಗಳು ನನ್ನ ಗಮನಕ್ಕೂ ಬಂದರೆ ಬಹಿಷ್ಕರಿಸಿದ ವ್ಯಕ್ತಿ ಎಂಥವನೇ ಆಗಿದ್ದರೂ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಸಂಘದ ಅಧ್ಯಕ್ಷನಾಗಿ ಎಲ್ಲ ಪದಾಧಿಕಾರಿಗಳೊಂದಿಗೆ ಸಮಾಜದಲ್ಲಿ ನಡೆಯುತ್ತಿರುವ ಅನ್ಯಾಯಗಳನ್ನು ತಡೆಗಟ್ಟಲು ನಾವು ಸಿದ್ಧರಾಗಿದ್ದೇವೆ ಎಂದರು.

ಕಾರ್ಯದರ್ಶಿ ರಮೇಶ್ ಸಿಂಗ್ ಹಜೇರಿ ಮನಗೂಳಿ ಮಾತನಾಡಿ, ವಿಜಯಪುರ ಜಿಲ್ಲಾ ರಜಪೂತ ಸಮಾಜದ ಹೆಸರು ಅಜರಾಮರವಾಗಿ ಉಳಿಯಲು ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳರವರು ಸಹಾಯ ಸಹಕಾರ ನೀಡಿ ಸಮಾಜದ ಗಣ್ಯರೊಂದಿಗೆ ಚರ್ಚಿಸಿ ಮಹಾರಾಣಾ ಪ್ರತಾಪ್ ಸಿಂಹ ರವರ ಬೃಹತ್ತಾದ ಮೂರ್ತಿ ಪ್ರತಿಷ್ಠಾಪನೆ ಮಾಡಿದರು. ಇದು ಅವರು ಮಾಡಿದ ಅಜರಾಮರವಾಗಿ ಜನ ನೆನೆಸಿಕೊಳ್ಳುವಂತಹ ಕಾರ್ಯವಾಗಿದೆ ಎಂದು ಹೇಳಿದರು.

ಸಂತೋಷ್ ತೇಲಿ ಅವರು ಮಾತನಾಡಿ, ವಿಜಯಪುರ ಜಿಲ್ಲೆಯಲ್ಲಿ ವೀರ ಮಹಾರಾಣಾ ಪ್ರತಾಪ್ ಸಿಂಹ ಸೇವಾ ಅಭಿವೃದ್ಧಿ ಸಂಘ ಸಾಕಷ್ಟು ಸಮಾಜಮುಖಿ ಕೆಲಸಗಳಲ್ಲಿ ತೊಡಗಿದ್ದು

ಮಹಾರಾಣ ಪ್ರತಾಪ್ ಸಿಂಹರವರ ಮೂರ್ತಿ ಪ್ರತಿಷ್ಠಾಪಿಸಿ ಇವತ್ತು ಸಮಾಜದ ಹೆಸರಿನಿಂದ ಉಳಿದಿರುವಂತ ಹಣವನ್ನು ಕೂಡ ಬ್ಯಾಂಕಿನಲ್ಲಿ ಡೆಪಾಸಿಟ್ ಮಾಡಿಲಾಗಿದೆ ಎಂದು ಇದು ಜಿಲ್ಲಾ ಅಧ್ಯಕ್ಷರ ಮಾರ್ಗದರ್ಶನದಂತೆ ಪ್ರತಿಯೊಂದು ಕೆಲಸಗಳು ನೆರವೇರುತ್ತವೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಪ್ರಕಾಶ್ ರಜಪುತ ನಿರೂಪಿಸಿದರು

## ಕ್ರಮಕ್ಕೆ ಆಗ್ರಹಿಸಿ ಜಯಕರ್ನಾಟಕ ಸಂಘಟನೆಯಿಂದ ತಹಸೀಲ್ದಾರರಿಗೆ ಮನವಿ

# ಗುತ್ತಿಗೆದಾರರು–ಅಧಿಕಾರಿಗಳಿಂದ ಬಡವರಿಗೆ ಮೋಸ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಪಟ್ಟಣದಲ್ಲಿ ಪ್ರಧಾನಮಂತ್ರಿ ಆವಾಸ ಯೋಜನೆ ಹಾಗೂ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ನಿರ್ಮಾಣವಾಗುತ್ತಿರುವ ಮನೆಗಳಿಗೆ ಕಡಿಮೆ ಅನುದಾನ ನೀಡಿ ಬಡಜನರಿಗೆ ಮೋಸ ಮಾಡಲಾಗುತ್ತಿದೆ ಎಂದು ಆರೋಪಿಸಿ ಗುತ್ತಿಗೆದಾರರು, ಅಧಿಕಾರಿಗಳು ಸೇರಿ ಬಡಜನರಿಗೆ ಮೋಸಮಾಡುತ್ತಿದ್ದಾರೆ ಸಂಘಟನೆ ಮೂಲಕ ಪಟ್ಟಣ ಪಂಚಾಯಿತಿ ಆಡಳಿತಾಧಿಕಾರಿ ತಹಶೀಲ್ದಾರ್ ಪ್ರಕಾಶ ಸಿಂದಗಿ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದಲ್ಲಿ ಜಯಕರ್ನಾಟಕ ಸಂಘಟನೆ ತಾಲ್ಲೂಕು ಅಧ್ಯಕ್ಷ ರೆಹಮಾನ ಕಣಕಾಲ, ಮನವಿ ಸಲ್ಲಿಸಿ ಮಾತನಾಡಿ, ಸರ್ಕಾರದಿಂದ ಮನೆಗಳ ನಿರ್ಮಾಣಕ್ಕೆ 6.86 ಲಕ್ಷ ಹಣ ನೀಡಲಾಗುತ್ತಿದೆ. ಇದರಲ್ಲಿ ಕೇಂದ್ರ ಸರ್ಕಾರದಿಂದ 1.50 ಲಕ್ಷ ರೂ. ಹಾಗೂ ರಾಜ್ಯ ಸರ್ಕಾರದಿಂದ 1.20 ಲಕ್ಷ ರೂಗಳ ಸಬ್ಸಿಡಿಯಿದೆ. ಈ ಯೋಜನೆ ಪಡೆದ ಫಲಾನುಭಾವಿಗಳು ಡಿಡಿ ಮುಖಾಂತರ ಸರ್ಕಾರಕ್ಕೆ 1.03 ಲಕ್ಷ ರೂ.ಗಳನ್ನು ತುಂಬಬೇಕು ಒಟ್ಟು ಸೇರಿ 3.73 ಲಕ್ಷರೂ. ಆಗಲಿದೆ. ಇನ್ನುಳಿದ 3.15 ಲಕ್ಷ ರೂ.ಗಳ ಮೊತ್ತವನ್ನು ಕಾರ್ಮಿಕ ಕಚೇರಿ ಅಥವಾ ವಿವಿಧ ಬ್ಯಾಂಕಗಳ ಸಹಾಯದಿಂದ ಪಡೆದಿರುತ್ತಾರೆ. ಎಂದು ತಿಳಿದುಬಂದಿದ್ದು. ಈಗ ನಾವು ಸಂಬಂಧಿಸಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರನ್ನು ಭೇಟಿ ನೀಡಿದಾಗ ಇದು ಯಾವುದು ನಿಜವಲ್ಲ ಎಂದು ಹೇಳಿ, ಪಟ್ಟಣದಲ್ಲಿ ಸುಮಾರು 200 ಕಡಿಮೆ ವೆಚ್ಚದ ಮನೆಗಳು ನಿರ್ಮಾಣಮಾಡಿರುವುದು ಕಂಡು ಬಂದಿದೆ.

ಮನೆಗಳ ನಿರ್ಮಾಣಕ್ಕೆ ಸಂಬಧಿಸಿದತೆ ಪತ್ರದ ಮೂಲಕ ಮೇಲಾಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಸಾರ್ವಜನಿಕರಿಗೆ ಸರಿಯಾದ ಮಾಹಿತಿ ನೀಡದೆ ಗುತ್ತಿಗೆದಾರರು, ಅಧಿಕಾರಿಗಳು ಸೇರಿ ಬಡಜನರಿಗೆ ಮೋಸ ಮಾಡುತ್ತಿದ್ದಾರೆ. ತಕ್ಷಣವೇ ಪ್ರತಿ ಮನೆಗೆ ಬರುವ ಅನುದಾನ ಹಾಗೂ ಸಬ್ಸಿಡಿ ಕುರಿತು ಸರಿಯಾದ ಮಾಹಿತಿ ಬಹಿರಂಗ ಪಡಿಸಬೇಕು ಹಾಗೂ ಉತ್ತಮ ಗುಣಮಟ್ಟದ ಮನೆಗಳನ್ನು ನಿರ್ಮಿಸಿಕೊಡಲು ಸೂಚಿಸಬೇಕು. ಮುಖ್ಯವಾಗಿ ತಪ್ಪು ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಮನವಿ ಮಾಡಿದರು.

ಸಿದ್ರಾಮಪ್ಪ ಅವಟಿ, ಇಮಾಮ ಮುಲ್ಲಾ, ಮಹಿಬೂಬ ವಾಲೀಕಾರ, ಪರಶುರಾಮ ಗೊಲ್ಲರ, ಸುನೀಲ ಕನಮಡಿ, ಪ್ರವೀಣ ಪವಾರ ಸೇರಿದಂತೆ ಜಯಕರ್ನಾಟಕ ಸಂಘಟನೆಯ ಪದಾಧಿಕಾರಿಗಳು, ಕಾರ್ಯಕರ್ತರು ಇದ್ದರು.

# ನ.1ರಿಂದ ಶರೀರ ಕ್ರಿಯಾ ಶಾಸ್ತ್ರಜ್ಞರ ರಾಷ್ಟ್ರೀಯ ಸಮ್ಮೇಳನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಶರೀರ ಕ್ರಿಯಾ ಶಾಸ್ತ್ರಜ್ಞರ ರಾಷ್ಟ್ರೀಯ 34ನೇ ಸಮ್ಮೇಳನ ನವೆಂಬರ್ 1ರಿಂದ ನವೆಂಬರ್ 3ರ ವರೆಗೆ ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದಲ್ಲಿ ನಡೆಯಲಿದೆ.

ಸಮ್ಮೇಳನ ಆರಂಭದ ಒಂದು ದಿನ ಮುಂಚೆ ನಿರಂತರ ವೈದ್ಯಕೀಯ ಶಿಕ್ಷಣ ಅಂಗವಾಗಿ ಆರೋಗ್ಯ ಮತ್ತು ಸುಖಃಸ್ಥಿತಿ ಶಾರೀರಿಕ ಶಾಸ್ತ್ರ ಕುರಿತು ಕಾರ್ಯಾಗಾರ ನಡೆಯಲಿದೆ.


ಈ ರಾಷ್ಟ್ರಿಯ ಸಮ್ಮೇಳನದಲ್ಲಿ ದೆಹಲಿಯ, ಎ.ಐ.ಐ.ಎಂ.ಎಸ್. ನ ನಿವೃತ್ತ ಡೀನ್ ಹಾಗೂ ಐಐಟಿ ಯ ಪ್ರಾಧ್ಯಾಪಕ ಡಾ. ಕೆ. ಕೆ. ದೀಪಕ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುತ್ತಿದ್ದು, 88 ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಖ್ಯಾತಿಯ ಭಾಷಣಕಾರರ ಪ್ರಬಂಧ ಮಂಡನೆ ಸೇರಿದಂತೆ ಸುಮಾರು 250 ಪ್ರತಿನಿಧಿಗಳು ಈ ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಷ್ಟ್ರೀಯ ಶರೀರಕ್ರಿಯಾ ಶಾಸ್ತ್ರಜ್ಞರ ಸೊಸೈಟಿ ನೀಡುವ 6 ರಾಷ್ಟ್ರೀಯ ಭಾಷಣ ಪ್ರಶಸ್ತಿಗಳನ್ನು ಈ ಸಮ್ಮೇಳನದಲ್ಲಿ ನೀಡಿ ಗೌರವಿಸಲಾಗುವುದು.

ರಕ್ತನಾಳ, ನರಮಂಡಲ, ನಿರ್ನಾಕಗ್ರಂಥಿ ಶರೀರಕ್ರಿಯಾ ಶಾಸ್ತ್ರ, ರೋಗವಿಜ್ಞಾನ ಮುಂತಾದ ವಿಷಯಗಳ ಕುರಿತು ವಿಚಾರ ಸಂಕಿರಣಗಳನ್ನು ನಡೆಸಿಕೊಡಲಾಗುತ್ತದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿರುವ ಬ್ರೆಝಿಲ್ ನ ಸಾವೋ ಪಾಲೋ ವಿಶ್ವವಿದ್ಯಾಲಯದ ಡಾ. ಬೆಸಿಡಿಟೊ ಮಶಾಡೋ, ಮಕ್ಸಿಕೋ ವಿಶ್ವವಿದ್ಯಾಲಯದ ಡಾ. ಜೋಸ್ ಎಂಟೋನಿಯೋ, ಅಮೆರಿಕರ ಪ್ರಿಟಚೋರಿಯಾ ವಿವಿಯ ಡಾ. ಟ್ರೆವರ್ ಎನ್., ರಾಜೀವ ಗಾಂಧಿ ಆರೋಗ್ಯ ವಿವಿಯ ಡಾ. ಪಿ. ಎಸ್. ಶಂಕರ, ಬೆಳಗಾವಿ ಕೆ.ಎಲ್.ಇ ವಿವಿಯ ಡಾ. ಎಸ್. ಎಸ್. ಗೌಡರ, ಅಮೇರಿಕದ ತುಲೇನ್ ವಿವಿಯ ಡಾ. ಡಿ. ಎಸ್. ಎ ಮಾಜಿದ್, ಕೊಲ್ಕೋತ್ತಾದ ಡಾ. ಎ. ಕೆ. ಚಂದ್ರ ಮುಂತಾದವರು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಈ ಸಮ್ಮೇಳನದಲ್ಲಿ ಬಿ.ಎಲ್.ಡಿ.ಇ. ವಿಶ್ವವಿದ್ಯಾಲಯದ ಕುಲಪತಿ ಡಾ. ಆರ್. ಎಸ್. ಮುಧೋಳ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಶರೀರ ಕ್ರಿಯಾಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ. ಕುಶಾಲ್ ಕೆ., ದಾಸ ಅವರು ಸಮ್ಮೇಳನದ ವೈಜ್ಞಾನಿಕ ಸಲಹೆಗಾರರಾಗಿದ್ದಾರೆ. ಕೊಲ್ಕೋತ್ತಾ ವಿವಿಯ ಡಾ. ಎ. ಕೆ. ಚಂದ್ರ ಮತ್ತು ಹಾಗೂ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಅರವಿಂದ ಪಾಟೀಲ, ವೈದ್ಯಕೀಯ ಮಹಾವಿದ್ಯಾಲಯದ ಉಪಪ್ರಾಚಾರ್ಯೆ ಮತ್ತು ಶರೀರಕ್ರಿಯಾ ಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಸುಮಂಗಲ ಪಾಟೀಲ ಮುಂತಾದವರು ಪಾಲ್ಗೊಳ್ಳಲಿದ್ದಾರೆ ಎಂದು ಶರೀರ ಕ್ರಿಯಾ ಶಾಸ್ತ್ರ ವಿಭಾಗದ ಮುಖ್ಯಸ್ಥೆ ಮತ್ತು ಸಂಘಟನಾ ಕಾರ್ಯದರ್ಶಿ ಡಾ, ಲತಾ ಎಂ. ಮುಳ್ಳೂರ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

# ಬಸವಣ್ಣ ಮತ್ತು ವೇಮನ ತತ್ವಗಳಲ್ಲಿ ಸಾಮ್ಯತೆ :ದೇಸಾಯಿ

**ಉದಯರಶ್ಮಿ ನ್ಯೂಸ್**




ಯಡ್ರಾಮಿ: 12ನೇ ಶತಮಾನದಲ್ಲಿ ಸಮ ಸಮಾಜಕ್ಕಾಗಿ ವಚನ ಚಳುವಳಿ ಹುಟ್ಟಿಕೊಂಡರೆ 15 ನೇ ಶತಮಾನದಲ್ಲಿನ ವೇಮನಾರಾಧ್ಯರ ಸಾಹಿತ್ಯ ಮೋಕ್ಷ ಪ್ರಾಪ್ತಿಯನ್ನು ಹಂಬಲಿಸುವ ತ್ರಿಪದಿಗಳಾಗಿವೆ ಎಂದು ಸಾಹಿತಿ–ಸಂಶೋಧಕ ನಿಂಗನೌಡ ದೇಸಾಯಿ ಹೇಳಿದರು.


ಪಟ್ಟಣದ ಸಗರಾದ್ರಿ ಸಾಂಸ್ಕೃತಿ–ಕ ಸಂಗಮ ಟ್ರಸ್ಟ್ ಹಾಗೂ ಶ್ರೀ ಮುರಘೇಂದ್ರ ಶಿವಯೋಗಿ ಫೌಂಡೇಶನ್ ಸಹಯೋಗದಲ್ಲಿ ಶನಿವಾರ ಆನ್ಲೈನ್ ಹುಣ್ಣಿಮೆ ಕಾರ್ಯಕ್ರಮ (ಸಂಗಮ–53)ದಲ್ಲಿ "ಬಸವಣ್ಣ ಮತ್ತು ವೇಮನ ವಚನಗಳ ಸಾಮ್ಯತೆ" ಎಂಬ ವಿಷಯದ ಕುರಿತು ಅವರು ಉಪನ್ಯಾಸ ನೀಡಿದರು.

ಬಸವಣ್ಣ ಮತ್ತು ವೇಮನರ ಬದುಕಿನಲ್ಲಿ ಸಾಕಷ್ಟು ವ್ಯತ್ಯಾಸಗಳನ್ನು ಕಾಣುತ್ತೇವೆ. ಆದರೆ ಇಬ್ಬರು ಮಹಾನ್‌ಪುರುಷರು ರಚನೆ ಮಾಡಿದ ಸಾಹಿತ್ಯದಲ್ಲಿನ ತತ್ವಗಳ ಸಾಮ್ಯತೆ ಗುರುತಿಸಬಹುದಾಗಿದೆ. ಬಸವಣ್ಣನವರು ಸಮಾಜ ಸುಧಾರಕರಾಗಿ ಸಮಾನತೆಗಾಗಿ ಅತಿದೊಡ್ಡ ಚಳುವಳಿಗೆ ನಾಂದಿ ಹಾಡಿದರು. ವೇಮನ ಮೂಲತಃ ಆಂಧ್ರ ನಾಡಿನವರಾಗಿದ್ದು, ಪ್ರಾರಂಭದಲ್ಲಿ ವೇಮನರು ಭೋಗಾದಿ ಜೀವನಕ್ಕೆ ಅಂಟಿಕೊಂಡಿದ್ದರೂ ಮುಂದೆ ಮನಸ್ಸು ಪರಿವರ್ತನೆ ಮಾಡಿಕೊಂಡು ಆಧ್ಯಾತ್ಮದತ್ತ ಒಲವು ಬೆಳೆಸಿಕೊಳ್ಳುವ ಮೂಲಕ ಅನುಭಾವ ಸಾಹಿತ್ಯದ ರಚನೆಯಲ್ಲಿ ತೊಡಗಿಸಿಕೊಂಡರು. ವೇಮನರು 3813 ಅನುಭಾವದ ತ್ರಿಪದಿಗಳನ್ನು ರಚಿಸದ್ದಾರೆ. ಬಸವಣ್ಣವರ ವಚನಗಳು ಮುಖ್ಯವಾಗಿ ಸಾಮಾಜಿಕ ಸಮಾನತೆ, ಕಾಯಕ, ದಾಸೋಹ ತತ್ವ ತಿಳಿಸಿದರೆ, ವೇಮನಾರಾಧ್ಯರ ವಚನಗಳ ಶೈಲಿಯ ತ್ರಿಪದಿ ಸಾಹಿತ್ಯ ಬಹುತೇಕ ಮೋಕ್ಷವನ್ನು ಹಂಬಲಿಸುವಂತವುಗಳಾಗಿವೆ. ಆದ–'ರೂ ವೇಮನರ ಸಾಹಿತ್ಯದಲ್ಲಿಯೂ ಗುರು,ಲಿಂಗ, ಜಂಗಮ, ಇತ್ಯಾದಿ ವಿಷಯಗಳಲ್ಲಿ ಬಸವಣ್ಣನವರ ವಚನಗಳಲ್ಲಿನ ತತ್ವಗಳಲ್ಲಿ ಸಾಮ್ಯತೆ ಸಾಮಾನ್ಯವಾಗಿ ಗುರುತಿಸಬಹುದಾಗಿದೆ ಎಂದರು.

ಈ ಸಂದರ್ಭದಲ್ಲಿ ಕಾರ್ಯಕ್ರಮದ ಸಾನಿಧ್ಯವನ್ನು ಯಡ್ರಾಮಿ ವಿರಕ್ತಮಠದ ಸಿದ್ಧಲಿಂಗ ಸ್ವಾಮೀಜಿ ವಹಿಸಿದ್ದರು. ಸಂಗಮದ ಕಾರ್ಯದರ್ಶಿ ಪ್ರಕಾಶ ಸಾಹು ಬೆಲ್ಲದ, ಲಕ್ಷ್ಮೀಕಾಂತ ಸೋನಾರ, ಪತ್ರಕರ್ತ ವಿಜಯೇಂದ್ರ ಕುಲಕರ್ಣಿ, ಸಾಹಿತಿ ನರಸಿಂಗರಾವ ಹೇಮನೂರ, ಸಿಪಿಐ ಅಲೀಸಾಬ ಬಾಗವಾನ, ಸದಾಶಿವ ಪತ್ತಾರ, ಶರಣಕುಮಾರ ಮಹೇಶ, ಸಿದ್ರಾಮಪ್ಪ ನವಲಗುಂದ, ಪರಮೇಶ್ವರ, ಸುರೇಶ ಪತ್ತಾರ, ಬಸವರಾಜ ಬಡಿಗೇರ, ಎಸ್.ಎಸ್. ಹೆಬ್ಬಾಳ, ವೀರಭದ್ರ ಪತ್ತಾರ, ಆರ್.ಜಿ. ಪುರಾಣಿಕ, ಪ್ರಶಾಂತ ಕುನ್ನೂರ ಸೇ–ರಿದಂತೆ ಅನೇಕರು ಪಾಲ್ಗೊಂಡಿದ್ದರು.

ಸಂತೋಷ ನವಲಗುಂದ ನಿರೂಪಿಸಿ, ವಂದಿಸಿದರು.

# ಮಾಹಿತಿ, ಸೌಲಭ್ಯಗಳ ಕೊರತೆ :ಪರಿಕ್ಷಾರ್ಥಿಗಳ ಪರದಾಟ



**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ನಿಗಮ ಮಂಡಳಿಗಳ ನೇಮಕಾತಿ ಪರೀಕ್ಷೆಗೆ ವಿವಿಧೆಡೆಗಳಿಂದ ಆಗಮಿಸಿದ ಅಭ್ಯರ್ಥಿಗಳು ಸರಿಯಾದ ಮಾಹಿತಿ, ಸೌಲಭ್ಯಗಳು ಇಲ್ಲದ ಕಾರಣ ಪರದಾಡಿದ ಪ್ರಸಂಗ ಭಾನುವಾರ ಕಂಡು ಬಂದವು.

ಪಟ್ಟಣದ ವೆಂಕಟೇಶ್ವರ ಕಾಲೇಜು ಹಾಗೂ ಬಿ.ಎಲ್.ಡಿ,ಇ ಸಂಸ್ಥೆಯ ಕಾಲೇಜಿನಲ್ಲಿ ಭಾನುವಾರ ಜರುಗಿದ ವಿವಿಧ ನಿಗಮ ಮಂಡಳಿಗಳ ನೇಮಕಾತಿ ಪರೀಕ್ಷೆಯಲ್ಲಿ ಆಗಮಿಸಿದ ದೂರದ ಅಭ್ಯರ್ಥಿಗಳಿಗೆ ಸರಿಯಾದ ಮಾಹಿತಿ ಹಾಗೂ ಸೌಲಭ್ಯಗಳಿಲ್ಲದೇ ಪರದಾಡುವಂತಾಯಿತು.

ಪಟ್ಟಣದಲ್ಲಿ ಭಾನುವಾರ ಜಾತ್ರೆಯಿದ್ದ ಕಾರಣ ಸಿಂದಗಿ, ತಾಳಿಕೋಟೆ, ಬಸವನಬಾಗೇವಾಡಿಗಳಿಂದ ಬರುವ ಬಸ್‌ಗಳು ಬಹಳ ದೂರವೇ ನಿಂತ ಕಾರಣ ಬೇರೆ ಪರ್ಯಾಯ ಸಾರಿಗೆ ವ್ಯವಸ್ಥೆ ಇರದ ಕಾರಣ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ನಡೆದುಕೊಂಡು ವಿಳಂಬವಾಗಿ ಬರುವಂತಾಯಿತು. ಪಟ್ಟಣದಲ್ಲಿ ಅಟೋರಿಕ್ಷಾಗಳಿದ್ದರೂ ಸಹ ಜಾತ್ರೆಯ ಕಾರಣ ಮುಖ್ಯರಸ್ತೆಗಳು ಜನಜಂಗುಳಿಯಿಂದ ಕೂಡಿದ್ದ ಪರಿಣಾಮ ರಿಕ್ಷಾಗಳು ಸಹ ಚಲಿಸಲಿಲ್ಲ. ಇನ್ನೂ ದೂರದ ಅಭ್ಯರ್ಥಿಗಳಿಗೆ ಪಟ್ಟಣದ ಪರೀಕ್ಷಾ ಕೇಂದ್ರಗಳ ಮಾಹಿತಿ ಇರದ ಕಾರಣ ಕೇಳುತ್ತಾ ಅಲೆದಾಡುವಂತಾಯಿತು.

ಪರೀಕ್ಷಾ ಕೇಂದ್ರ ತಲುಪಿದ ಅಭ್ಯರ್ಥಿಗಳಿಗೆ ಪ್ರವೇಶಪತ್ರದ ನಕಲುಪ್ರತಿ ಕಡ್ಡಾಯವಾಗಿ ಇರಬೇಕು ಎಂಬ ವಿಷಯದ ಕುರಿತು ಮಾಹಿತಿ ಇರದ ಕಾರಣ ಪರೀಕ್ಷಾ ಕೇಂದ್ರ ತಲುಪಿದ ನಂತರ ಕೇಂದ್ರದ ಸಿಬ್ಬಂದಿ ತಿಳಿಸಿದಾಗ ದೂರದ ಝರಾಕ್ಸ್ ಅಂಗಡಿಗಳಿಗೆ ಅಲೆಯುವ ಪ್ರಸಂಗ ಎದುರಾಯಿತು. ಎರಡು ಪರೀಕ್ಷೆಗಳ ನಡುವೆ ಸಮಯವಿದ್ದಾಗ ಉಪಹಾರ ಮಾಡಲು ಸಮೀಪದಲ್ಲಿ ಯಾವುದೇ ಉಪಹಾರ ಗೃಹ, ಚಹಾ ಅಂಗಡಿಗಳಿರದೇ ಪಾಲಕರು, ಅಭ್ಯರ್ಥಿಗಳು ನಿರಾಶೆ ಅನುಭವಿಸುವಂತಾಯಿತು.

ಮುಂದಿನ ದಿನಗಳಲ್ಲಿ ಸರ್ಕಾರ ಪರೀಕ್ಷಾ ಕೇಂದ್ರಗಳ ಆಯ್ಕೆ ಮಾಡುವಾಗ ಮೂಲಭೂತ ಸೌಲಭ್ಯಗಳಿರುವ ಕಾಲೇಜುಗಳನ್ನು ಆಯ್ಕೆ ಮಾಡಬೇಕು. ಈ ಮೂಲಕ ಪರೀಕ್ಷಾರ್ಥಿಗಳ ತೊಂದರೆ ತಪ್ಪಿಸಬೇಕು ಎಂದು ಹೆಸರು ಹೇಳಲು ಇಚ್ಛಿಸದ ಅಭ್ಯರ್ಥಿಗಳು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

# ನ.1ರಂದು ಹಾಲುಮತ ಸಮಾಜದ ಸಭೆ

**ಉದಯರಶ್ಮಿ ನ್ಯೂಸ್**

ವಿಜಯಪರ: ಜಿಲ್ಲಾ ಹಾಲುಮತ ಸಮಾಜದ ವತಿಯಿಂದ ನೂತನವಾಗಿ ಸಹಕಾರಿ ಬ್ಯಾಂಕ್ ಪ್ರಾರಂಭಿಸಲು ಇಚ್ಚೆಸಿದ್ದು, ಈ ಕುರಿತು ವಿಜಯಪುರ ಜಿಲ್ಲಾ ಹಾಲುಮತ ಸಮಾಜದ ಮುಖಂಡರ ಒಮ್ಮತವನ್ನು ಪಡೆಯಲು ದಿ.01–11–2023 ರಂದು ನಗರದ ಶ್ರೀ ಸಿದ್ಧರಾಮೇಶ್ವರ ದೇವಸ್ಥಾನ, ಶಿಖಾರಖಾನೆಯಲ್ಲಿ ಈ ಕು–ರಿತು ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಆದ್ದರಿಂದ ಈ ಸಭೆಯಲ್ಲಿ ಹಾಲುಮತ ಸಮಾಜದ ಹಿರಿಯ ಮುಖಂಡರು, ಸಂಘಟನೆಗಳ ಗಣ್ಯರು, ಮುಖಂಡರು, ಯುವ ಧುರೀಣರು, ರಾಜಕೀಯ ಮುತ್ಸದ್ಧಿಗಳು,ಜಿಲ್ಲಾ ಹಾಲುಮತ ನೌಕರರು, ಹಾಲುಮತ ಸಮಾಜದ ಪದಾಧಿಕಾರಿಗಳು ಹಾಜರಿದ್ದು ತಮ್ಮ ಸಲಹೆ ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ವಿಜಯಪುರ ನಗರ ಘಟಕ ಕುರುಬರ ಸಂಘದ ಅಧ್ಯಕ್ಷ ರಾಜು ಕಗ್ಗೋಡ, ಹಾಗೂ ಕಾರ್ಯದರ್ಶಿ ರಮೇಶ ಕಾಲೇಬಾಗ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜಕೀಯ ನನಗೆ ತಂದೆ ಕೊಟ್ಟ ಬಳುವಳಿ :ಶಾಸಕ ಮನಗೂಳಿ



ಉದಯರಶ್ಮಿ ನ್ಯೂಸ್

ಮೋರಟಗಿ: ತಂದೆಯ ಕೊಟ್ಟ ಬಹುದೊಡ್ಡ ಬಳುವಳಿಯಲ್ಲಿ ನನ್ನ ರಾಜಕೀಯವೂ ಸೇರಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಮೀಪದ ಕುಳೇಕುಮಟಗಿ ಗ್ರಾಮದಲ್ಲಿ ನೂತನ ಶಾಸಕರಾಗಿ ಆಯ್ಕೆಯಾದ ಪ್ರಯುಕ್ತ ಗ್ರಾಮಸ್ಥ-ರಿಂದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದ ಅವರು,

ಅಶೋಕ ಮನಗೂಳಿ ಯಾರು ಅನ್ನುವುದು ಜನತೆಯ ಹೃದಯದಲ್ಲಿ ಮೂಡುವಂತೆ ಮಾಡಿದ್ದು ನಮ್ಮ ದಿ.ತಂದೆಯವರು. ನನ್ನ ತಂದೆ ಕಷ್ಟದ ಜೀವನ ಮೆಟ್ಟಿ ಜನರ ಕಷ್ಟ ಪರಿಹರಿಸುವ ಶಾಸಕರಾಗಿ, ಸಚಿವರಾಗಿ, ನೂರಾರು ಗ್ರಾಮಗಳಲ್ಲಿ ಮೂಲ ಸೌಕರ್ಯ, ದೇವಸ್ಥಾನಗಳ ಜೀರ್ಣೋದ್ಧಾರ, ರಸ್ತೆ ಕಾಮಗಾರಿ ಹೀಗೆ ಹತ್ತು ಹಲವು ಯೋಜನೆಗಳನ್ನು ಕೈಗೊಂಡು, ರೈತರ ಕಷ್ಟ ಅರಿತು ಗುತ್ತಿ ಬಸವಣ್ಣ ಏತ ನೀರಾವ-ರಿಗೆ ಕಂಕಣತೊಟ್ಟು ಕಾರ್ಯಗತ ಮಾಡಿದವರು ನನ್ನ ತಂದೆ. ಅವರ ರಾಜಕೀಯದಲ್ಲಿ ಪಳಗಿದ ನಾನು ಜನ ಸಾಮಾನ್ಯರಿಗೆ ಸ್ಪಂದಿಸುವ ಅನುಭವ ಪಡೆದೆ. ತಂದೆಯಿಂದ ಕಲಿತ ರಾಜಕೀಯದಿಂದಾಗಿ ಇಂದು ಶಾಸಕನಾಗಿ ಆಯ್ಕೆಯಾಗಿರುವೆ. ನೀವು ಇಟ್ಟ ಪ್ರೀತಿ ವಿಶ್ವಾಸ ಮುಂದಿನ ಬಾರಿ ಅಂದರೆ ಐದು ವರ್ಷ ಕಳೆದ ಮೇಲೆ ನಾನು ಪ್ರಾಮಾಣಿಕವಾಗಿ ಸೇವೆ ಮಾಡಿ ನಿಮ್ಮಭರವಸೆ ಉಳಿಸಿಕೊಂಡು ನಿಮ್ಮಿಂದ ಅಭಿವೃದ್ಧಿ ಹರಿಕಾರ ಅಶೋಕ ಮನಗೂಳಿ ಎಂದು ಬಿರುದು ಪಡೆದಾಗ ನನ್ನ ರಾಜಕೀಯಕ್ಕೆ ಸಾರ್ಥಕತೆ ಸಿಗುವುದು ಎಂದು ಹೇಳಿದರು.

ಅವರು ನನ್ನ ಅವಧಿಯಲ್ಲಿ ಆರೋಗ್ಯ ಮತ್ತು ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡುವೆ. ಕುಳೇಕುಮಟಗಿ ಪ್ರಾಥಮಿಕ ಶಾಲೆಯಲ್ಲಿ ಒಂದರಿಂದ ಎಂಟನೇ ತರಗತಿ ವಿದ್ಯಾರ್ಥಿಗಳಿದ್ದು, ಒಂಬತ್ತು ಹತ್ತನೆ ತರಗತಿ ಶಿಕ್ಷಣ ಇಲ್ಲಿಯೇ ಮುಂದುವರೆಸುವಂತೆ ಮಾಡುವೆ ಎಂದರು.

ಮಾಜಿ ಜಿಲ್ಲಾ ಪಂಚಾಯತ ಸದಸ್ಯ ನರಸಿಂಗ್ ಪ್ರಸಾದ ತಿವಾರಿ, ಅಂಜುಮನ್ ಕಮೀಟಿ ಕಾರ್ಯದರ್ಶಿ ಮೈಬೂಬಸಾಬ ಕಣ್ಣಿ, ಪಿಕೆಪಿಎಸ್ ಅಧ್ಯಕ್ಷ ವೀರನಗೌಡ ಪಾಟೀಲ, ಬಸಯ್ಯಸ್ವಾಮಿ ರಾಮಗಿರಿಮಠ, ಗುರುಲಿಂಗಯ್ಯ ನಡಕಟ್ಟಿ, ಬಗಲೂರ ಪಿಕೆಪಿಎಸ್ ಅಧ್ಯಕ್ಷ ಪಾವಡೆಪ್ಪಗೌಡ ಪಾಟೀಲ, ಗುರುಪಾದಪ್ಪಗೌಡ ಹಿರಬಟ್ಟಿ, ಕಾಂತು ಮೋರಟಗಿ, ಭೂ ನ್ಯಾಯ ಮಂಡಳಿ ನಿರ್ದೇಶಕ ಧರ್ಮಣ್ಣ ಯಂಟಮಾನ ಸೇರಿದಂತೆ ಹಲವರಿದ್ದರು.

# ರಾವುತರಾಯ-ಮಲ್ಲಯ್ಯನ ಅದ್ಧೂರಿ ಜಾತ್ರೆ ಸಂಪನ್ನ



ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಸತತ ನಾಲ್ಕು ದಿನಗಳಿಂದ ನಡೆದ ರಾವುತರಾಯ-ಮಲ್ಲಯ್ಯನ ಅದ್ಧೂರಿ ಜಾತ್ರೆ ನಾಡಿನ ಮೂಲೆಗಳಿಂದ ಬಂದ ಸಹಸ್ರಾರು ಭಕ್ತರ ಮಧ್ಯೆ ಭಾನುವಾರ ಸಂಪನ್ನವಾಯಿತು.


ಪಟ್ಟಣದ ಹೊರವಲಯದ ಮಲ್ಲಯ್ಯನ ದೇವಸ್ಥಾನಕ್ಕೆ ಕಳೆದ ಗುರುವಾರದಂದು ತೆರಳಿದ್ದ ರಾವುತರಾಯನನ್ನು ತೆರೆದ ಬಂಡಿಯಲ್ಲಿ ಸಹಸ್ರಾರು ಭಕ್ತಾಧಿಗಳ ಜಯಘೋಷದ ಮದ್ಯೆ ಮೂಲ ದೇವಸ್ಥಾನಕ್ಕೆ ಕರೆ ತರಲಾಯಿತು. ನಾಡಿನ ಹಾಗು ಮಹಾರಾಷ್ಟ್ರ, ಆಂಧ್ರ, ಗೋವಾ ರಾಜ್ಯಗಳಿಂದ ಆಗಮಿಸಿದ ಭಕ್ತ ಸಮೂಹ ವಾಸ್ತವ್ಯ ಹೂಡಿ ವಿವಿಧ ಪೂಜಾ ಕರ್ಯಕ್ರಮಗಳಲ್ಲಿ ಪಾಲ್ಗೊಂಡು ಪುನೀತರಾದರು. ಬೆಳಿಗ್ಗೆ 7.00 ಗಂಟೆಗೆ ಪ್ರಾರಂಭವಾದ ಭವ್ಯ ಬಂಡಿ ಮೆರವಣಿಗೆಯಲ್ಲಿ ವಿರಾಜಮಾನನಾಗಿ ಕಂಗೊಳಿಸಿದ ರಾವುತರಾಯನನ್ನು ಭಕ್ತಾಧಿಗಳು ಭಕ್ತಿಯೊಂದಿಗೆ ಭಂಡಾರ ಎಸೆದು ಏಳುಕೋಟಿ ಏಳುಕೋಟಿ ಏಳುಕೋಟಿಗೇ ಎಂಬ ಜಯಕಾರದೊಂದಿಗೆ ಭಕ್ತಿ ಸಮರ್ಪಿಸಿದರು.

ಜಾತ್ರೆಯಲ್ಲಿ ವಿಶೇಷವಾಗಿ ಪುರುಷ ವಗ್ಗಗಳು ಹೆಗಲ ಮೇಲೆ ಕಂಬಳಿ ಹೊತ್ತು, ಕೈಯಲ್ಲಿ ತ್ರಿಶೂಲ ಹಿಡಿದು ಹಣೆ ತುಂಬ ಭಂಡಾರ ಬಡಿದುಕೊಂಡು ರಾವುತರಾಯನ ಬಂಡಿ ಮುಂದೆ ಕುಣಿಯುತ್ತ ಜನರ ಗಮನ ಸೆಳೆದರು. ಪಟ್ಟಣದ ಜನರು ನಾಲ್ಕು ದಿನಗಳವರೆಗೆ ತಮ್ಮ ಕೆಲಸ ಕರ್ಯಗಳನ್ನು ಬದಿಗೊತ್ತಿ, ಪ್ರತಿದಿನ ಪೂಜಾಕಾರ್ಯ ಸಾಂಸ್ಕೃತಿ-ಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಜಾತ್ರೋತ್ಸವಕ್ಕೆ ಮೆರಗು ತಂದರು. ಜಾತ್ರೆಯುದ್ದಕ್ಕೂ ಪೊಲೀಸ್ ಸಿಬ್ಬಂದಿ ಸೂಕ್ತ ಬಂದೋಬಸ್ತ ವಹಿಸಿದ್ದರಿಂದ ಯಾವುದೆ ಅಹಿತಕರ ಘಟನೆಗಳು ನಡೆಯದೆ ಶಾಂತಿಯಿಂದ ಮುಕ್ತಾಯಗೊಂಡ ಜಾತ್ರೆ ಜನಸಮೂಹದ ಪ್ರಶಂಸೆಗೆ ಪಾತ್ರವಾಯಿತು.

## ಕಾರಣಿಕರ ಭವಿಷ್ಯದ ಹೇಳಿಕೆ

ರಾವುತರಾಯ ಪ್ರತಿವರ್ಷ ಮಲ್ಲಯ್ಯ ದೇವಸ್ಥಾನಕ್ಕೆ ತೆರಳುವಾಗ ಹಾಗೂ ಬರುವಾಗ ಕಾರಣಿಕರು ಭವಿಷ್ಯದ ಕುರಿತು ಹೇಳಿಕೆಗಳನ್ನು ಹೇಳುವ ವಾಡಿಕೆಯಿದ್ದು, ಈ ಬಾರಿ ಅವರು ಹೇಳಿದಂತೆ, ಕಾಲಮಾನ ಬಹಳ ಕಷ್ಟಬಂತು. ಜನರಿಗೆ ಎಷ್ಟು ಹೇಳಿದರೂ ತಿಳಿಯುತ್ತಿಲ್ಲ. ಕರ್ಮ, ಧರ್ಮಗಳಲ್ಲಿ ಧರ್ಮ ಕಡಿಮೆಯಾಗಿ ಕರ್ಮದ ತೂಕವೇ ಹೆಚ್ಚಾಗುತ್ತಿದೆ. ಸ್ವಾತಿ, ಚಿತ್ತಾ ಮಳೆಗಾಲದ ಮಳೆಗಳಲ್ಲ. ಆದರೂ ಮಳೆ ನೀಡಿ ಬಿಳಿಜೋಳ ಮುತ್ತಿನಂಗೆ ಮಾಡಿ ತೋರಿಸುವೆ. ಎಂಟು ಎತ್ತು ಕಟ್ಟಿದವನು ಈಗ ಒಂಟ ಎತ್ತು ಕಟ್ಟುತ್ತಾನ. ಛಪ್ಪನ್ನಾರು ದೇಶ ಸುತ್ತಿದ್ದರೂ ಬರವೇ ಕಾಣುವುದು. ಧರ್ಮದಿಂದ ನಡೆದವರನ್ನು ಅಂಗೈಯಲ್ಲಿ ಹಿಡಿದು ಕಾಯುವೆ. ಇಷ್ಟು ವರ್ಷ ಬಡಿಗೆಗಳು ಹಾರಾಡಿಲ್ಲ. ಇನ್ನೂ ಹಾರಾಡುತ್ತವೆ ಎಂದು ಹೇಳುವ ಮೂಲಕ ಕಷ್ಟಕಾಲದ ಕುರಿತು ಸುಳಿವು ನೀಡಿದರು.

# ಪಟ್ಟಾಧಿಕಾರ ಕುರಿತ ಸಭೆಯಲ್ಲಿ ಪೂರ್ಣ ಸಹಕಾರದ ಭರವಸೆ



ಉದಯರಶ್ಮಿ ನ್ಯೂಸ್

– ಚೇತನ ಶಿವಶಿಂಪಿ

ಮುದ್ದೇಬಿಹಾಳ: ಶ್ರೀಗಳ ದಂಡು, ಪಕ್ಷ ಬೇಧ ಮರೆತು ರಾಜಕೀಯ ನಾಯಕರ ಆಗಮನ. ಹರಿದುಬಂದ ಜನ ಸಮೂಹ. ನಿಲ್ಲಲೂ ಜಾಗವಿಲ್ಲದಷ್ಟು ಅಜ್ಜನ ಸಂಪಾದನೆ. ಕಾಣಿಕೆ ನೀಡಬೇಕು ಅಂದಿದ್ದೇ ತಡ ಲಕ್ಷ ರೂಪಾಯಿಗೂ ವಿಚಾರ ಮಾಡದೇ, ಬಂಗಾರಕ್ಕೂ ಲೆಕ್ಕ ಹಾಕದೇ ನಾ ಮುಂದು ತಾ ಮುಂದು ಅಂತ ಓಡಿ ಬಂದು, ಅಜ್ಜನ ಮೇಲಿರುವ ಪ್ರೀತಿಯನ್ನು ತೋರಲು ಒದಗಿ ಬಂದ ಅವಕಾಶದ ಸದುಪಯೋಗ ಪಡೆದುಕೊಂಡ ಭಕ್ತರು. ಸುಮಾರು ವರ್ಷಗಳಿಂದ ಈ ಭಾಗದಲ್ಲಿ ನಿಸ್ವಾರ್ಥ ಸೇವೆ ನೀಡಿದ ಅಜ್ಜನ ಕಣ್ಣಲ್ಲಿ ಮಾತು ಬಾರದಷ್ಟು ಆನಂದ ಭಾಷ್ಪ. ಇಂತಹದ್ದೊಂದು ಸನ್ನಿವೇಶ ಕಂಡಿದ್ದು ತಾಲೂಕಿನ ಸುಕ್ಷೇತ್ರ ಕುಂಟೋಜಿ ಬಸವೇಶ್ವರ ದೇವಸ್ಥಾನದಲ್ಲಿ.

ಅದು ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ದೇವರ ಪಟ್ಟಾಧಿಕಾರ ಮಹೋತ್ಸವದ ಪೂರ್ವಭಾವಿ ಸಭೆ. ಆದರೆ ಅಲ್ಲಿ ನೆರೆದಿದ್ದ ಸಮೂಹ ಮಾತ್ರ ಜಾತಿ, ಮತ, ಬೇಧ, ಪಕ್ಷ ಎನ್ನದೇ ನಿಜವಾಗಿಯೂ ಅಜ್ಜನನ್ನು ಪ್ರೀತಿಸುವ ಜನ.

ಸನ್ಯಾಸಿಗಳಿಗೆ ಭಕ್ತರ ಸಮೂಹ ಇರೋದು ಸಹಜ. ಆದ-ರೆ ಈ ಸಂಸ್ಥಾನ ಮಠ ಅತ್ಯಂತ ಚಿಕ್ಕದು. ಆದರೆ ಆ ಪೀಠವನ್ನು ಅಲಂಕರಿಸುವ ಅಜ್ಜನ ಮನಸ್ಸು ಮಾತ್ರ ಎಷ್ಟು ದೊಡ್ಡದೆಂದು ಗೊತ್ತಾಗಿದ್ದು ಈ ಸಭೆ ನೋಡಿದ ಬಳಿಕವೇ ಅಂತಾರೆ ಬಹಳಷ್ಟು ಭಕ್ತರು. ಮುದ್ದೇಬಿಹಾಳ, ತಾಳಿಕೋಟೆ, ನಾಲತವಾಡ ಮತ್ತು ಸುತ್ತಮುತ್ತಲಿನ ಹಳ್ಳಿಗಳ ಭಕ್ತರು ಮಾತ್ರವಲ್ಲದೇ ದೂರದ ಜಿಲ್ಲೆಗಳಿಂದಲೂ ಭಕ್ತರು ಆಗಮಿಸಿದ್ದರು.

ದೇವಿಕಾ ಸುಬ್ಬರಾವ ಫೌಂಡೇಶನ್, ಬಾಲಾಜಿ ಶುಗರ್ಸ್ ಕಂಪನಿ, ಅಸ್ಕಿ ಫೌಂಡೇಶನ್, ಮೂಕಿಹಾಳ ಗ್ರಾಮದ ಸದ್ಭಕ್ತರು ಸೇರಿದಂತೆ ಅನೇಕರು ಎಲ್ಲ ರೀತಿಯ ಸೇವೆಯ ಸಹಕಾರ ನೀಡುವ ಭರವಸೆ ನೀಡಿದರು.

ಪಟ್ಟಾಧಿಕಾರ ದಿನಾಂಕವನ್ನು ಮಾರ್ಚ್ 5,6,7 ರಂದು ನಿಗದಿಪಡಿಸಲಾಯಿತು. ಕಾರ್ಯಕ್ರಮದ ರೂಪರೇಷೆಗಳ ಕುರಿತು ಚರ್ಚಿಸಲಾಯಿತು. ಎಲ್ಲ ಮುಖಂಡರು, ರಾಜಕೀಯ ನಾಯಕರು, ಸಮಾಜ ಸೇವಕರು, ನ್ಯಾಯವಾದಿಗಳು, ಪತ್ರಕರ್ತರು ಸೇರಿದಂತೆ ಎಲ್ಲ ಮಹನೀಯರೂ ಖುದ್ದು ನಿಂತು ಪಟ್ಟಾಧಿಕಾರದ ಜವಾಬ್ದಾರಿಯನ್ನು ಹೊರುವುದಾಗಿ ವಾಗ್ದಾನ ನೀಡಿದರು. ಶುದ್ಧ ಕುಡಿಯುವ ನೀರು ಮತ್ತು ಮಜ್ಜಿಗೆ ಸೇವೆಯನ್ನು ಮುಸ್ಲಿಂ ಸಮಾಜದ ಬಂಧುಗಳು ನೀಡುವದಾಗಿ ತಿಳಿಸಿ ಭಾವೈಕ್ಯತೆಗೆ ಸಾಕ್ಷಿಯಾದರು. ಪೆಂಡಾಲ್, ದಾಸೋಹದ ಸೇವೆ, ಸಾಮೂಹಿಕ ವಿವಾಹಗಳಿಗೆ ತಗಲುವ ಖರ್ಚು ಹೀಗೆ ಪಟ್ಟಾಧಿಕಾರ ಮಹೋತ್ಸಕ್ಕೆ ಬೇಕಾಗುವ ದೊಡ್ಡ ಪ್ರಮಾಣದ ಸೇರಿದಂತೆ ಎಲ್ಲ ರೀತಿಯ ಖರ್ಚುಗಳನ್ನು ನೀಡುವದಾಗುದು ಎಂದು ಹಲವಾರು ಭಕ್ತರು ತುಂಬಿದ ಸಭೆಯಲ್ಲಿ ವಚನ ನೀಡಿದರು.

ರಾಜ್ಯದಲ್ಲಿ ಹಲವಾರು ಪಟ್ಟಾಧಿಕಾರವನ್ನು ನಾವು ಮಾಡಿದ್ದೇವೆ. ಆದರೆ ಪೂರ್ವಭಾವಿ ಸಭೆಯಲ್ಲಿ ಇಷ್ಟೊಂದು ಜನ ಸೇರಿದ್ದು ನಾನೆಲ್ಲೂ ಕಂಡಿಲ್ಲ. ಇದು ಇತಿಹಾಸ. ಇಲ್ಲಿ ಪೂರ್ವಭಾವಿ ಸಭೆಯೇ ಪಟ್ಟಾಧಿಕಾರದ ಸಭೆಯಾಗಿದೆ. ಇಷ್ಟೊಂದು ಸ್ವಾಮಿಗಳನ್ನು ಮತ್ತು ಭಕ್ತರನ್ನು ಸಂಪಾದನೆ ಮಾಡಿದ ಚನ್ನವೀರ ದೇವರ ಪಟ್ಟಾಧಿಕಾರ ಯಾವುದೇ ವಿಘ್ನವಿಲ್ಲದೇ ನಿರ್ವಿಘ್ನವಾಗಿ ನೆರವೇರಲಿದೆ.

**– ಫಕೀರ ದಿಂಗಾಲೇಶ್ವರ ಶ್ರೀಗಳು, ಶಿರಹಟ್ಟಿ ಸಂಸ್ಥಾನ ಮಠ.**

ಶ್ರೀಗಳ ಪಟ್ಟಾಧಿಕಾರ ಮಹೋತ್ಸವದಲ್ಲಿ ಸೇವೆ ಸಲ್ಲಿಸುವ ಭಾಗ್ಯ ಸಿಕ್ಕಿದ್ದು ನಮ್ಮೆಲ್ಲರ ಪುಣ್ಯ. ಪಕ್ಷ ಬೇಧ ಮರೆತು ಎಲ್ಲರೂ ಒಂದಾಗಿ ಬಹಳ ಜವಾಬ್ದಾರಿಯಿಂದ ಎಲ್ಲ ಕಾರ್ಯವನ್ನು ನಿರ್ವಹಿಸುತ್ತೇವೆ.

**– ಸಿ.ಎಸ್.ನಾಡಗೌಡ ಅಪ್ಪಾಜಿ, ಶಾಸಕರು.**

ನಿಮ್ಮೆಲ್ಲರ ಪ್ರೀತಿಗೆ ಮಾತು ಬಾರದಷ್ಟು ಮೂಕನಾಗಿದ್ದೇನೆ. ನನ್ನ ಮೇಲೆ ನೀವು ಇಷ್ಟೊಂದು ಪ್ರೀತಿ ತೋರಿದ್ದಕ್ಕೆ ನಾನು ಚಿರಋಣಿ. ಪಟ್ಟಾಧಿಕಾರ ಮಹೋತ್ಸವದಲ್ಲಿ ಎಲ್ಲರೂ ಮುಂದೆ ನಿಲ್ಲುತ್ತೀರಿ ಎಂಬ ವಿಶ್ವಾಸ ನನಗಿದೆ. ಮುಂದಿನ ದಿನಗಳಲ್ಲಿ ಸಮಾಜಕ್ಕಾಗಿ ನನ್ನ ಉಸಿರು ಇರುವವರೆಗೂ ಹಗಲಿರುಳು ಶ್ರಮಿಸುತ್ತೇನೆ.

**– ಡಾ.ಚನ್ನವೀರ ದೇವರು, ಸಂಸ್ಥಾನ ಹಿರೇಮಠ ಕುಂಟೋಜಿ.**

# ಸಮುದಾಯದತ್ತ ಶಾಲೆ: ಶೈಕ್ಷಣಿಕ ಪ್ರಗತಿ ಪರಿಶೀಲನೆ



ಉದಯರಶ್ಮಿ ನ್ಯೂಸ್

ಆಲಮಟ್ಟಿ: ಸಮೀಪದ ಚಿಮ್ಮಲಗಿ ಭಾಗ 1 (ಬಿ)ಪುನರ್ವಸತಿ ಕೇಂದ್ರದಲ್ಲಿನ ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಪ್ರಸಕ್ತ ಸಾಲಿನ ಮೊದಲನೇ ಸಮುದಾಯದತ್ತ ಶಾಲಾ ಕಾರ್ಯಕ್ರಮ ನಡೆಯಿತು.

ಮಕ್ಕಳ ದಾಖಲಾತಿ, ಹಾಜರಾತಿ, ವೈಯಕ್ತಿಕ ಶೈಕ್ಷಣಿಕ ಪ್ರಗತಿ, ಕ್ರೋಢೀಕ-ರಿಸಿದ ಪ್ರಗತಿ ಪತ್ರ, ಸಹಪಠ್ಯ ಸಾಂಸ್ಕೃತಿಕ ಚಟುವಟಿಕೆಗಳ ಮಾಹಿತಿ, ಶಾಲಾಭಿವೃದ್ಧಿ, ಪಠ್ಯಕ್ರಮ ಆಧಾರಿಸಿ ಅನುಸರಿಸಿದ ಕ್ರಮ, ಶಾಲಾ ಪರಿಸರ ಸೇರಿದಂತೆ ಇತ್ಯಾದಿ ಗುಣಮಟ್ಟದ ಶಿಕ್ಷಣಕ್ಕೆ ಪೂರಕವಾದ ವಿಷಯದ ಅಂಶಗಳನ್ನು ಪರಿಶೀಲಿಸಲಾಯಿತು.

ಕಾರ್ಯಕ್ರಮದ ಮಾರ್ಗದರ್ಶಿ ಆರ್.ಬಿ.ಪಿ.ಜಿ.ಹಳಕಟ್ಟಿ ಪ್ರೌಢಶಾಲೆ ಚಿತ್ರಕಲಾ ಶಿಕ್ಷಕ ಜಿ.ಆರ್. ಜಾಧವ ಸಮುದಾಯದತ್ತ ಶಾಲಾ ಅಂಶಗಳನ್ನು ಪರಿಶೀಲಿಸಿ ಮಕ್ಕಳೊಂದಿಗೆ ಬೆರೆತು ಓದು, ಬರಹದ ಆಸಕ್ತಿ ಬಾಲ್ಯಾವಸ್ಥೆಯಲ್ಲಿಯೇ ಮೈಗೂಡಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿದರು. ಆಧುನಿಕತೆಯ ದಿನಮಾನದಲ್ಲಿಂದು ಸಾಮಾನ್ಯ ಜ್ಞಾನ ಅತ್ಯವಶ್ಯಕ ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.

ಶಾಲಾ ಮುಖ್ಯಗುರು ಎಸ್.ಎಂ.ಮಾದರ ಮಾತನಾಡಿ, ಮಕ್ಕಳಿಗೆ ಕಲಿಕಾಭಿರುಚಿ ಮೂಡಿಸಲು ಶಾಲಾ ಶಿಕ್ಷಕರು ಶ್ರಮಿಸುತ್ತಿದ್ದಾರೆ. ಗುಣಮಟ್ಟದ ಶಿಕ್ಷಣಕ್ಕೆ ಇಲ್ಲಿ ಆದ್ಯತೆ ನೀಡಲಾಗಿದೆ. ಶಾಲಾ ಕೊಠಡಿಗಳು ಸುಂದರವಾಗಿ ಚಿತ್ರಪಟಗಳಿಂದ ಕೂಡಿವೆ. ಮಕ್ಕಳಿಗೆ ಓದಿನ, ಅಧ್ಯಯನದ ಆಸಕ್ತಿ ಕೆರಳಿಸುವಂತಿವೆ. ಸ್ವಚ್ಛ, ಪರಿಸರದಲ್ಲಿ ಜ್ಞಾನಾರ್ಜನೆ ಕೈಂಕರ್ಯ ತಮ್ಮ ಶಾಲೆಯಲ್ಲಿ ಶ್ರದ್ಧೆಯಿಂದ ಸಾಗುತ್ತಿದೆ ಎಂದರು.

ಈ ವೇಳೆ ಗುರುಮಾತೆಯರಾದ ಶ್ರೀಮತಿ ಎನ್.ಎಸ್.ನಾಲ್ವತವಾಡ, ಶ್ರೀಮತಿ ವಾಯ್.ಬಿ.ದೊಡಮನಿ, ಶಿಕ್ಷಕ ಎಸ್.ಬಿ.ಇಂಡಿ ಇತರರಿದ್ದರು.

# ಜಿಲ್ಲಾಡಳಿತದಿಂದ ನ.1ರಂದು ಕರ್ನಾಟಕ ರಾಜ್ಯೋತ್ಸವ



ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾಡಳಿತ, ವಿಜಯಪುರ ವತಿಯಿಂದ ನವೆಂಬರ್ 01 ರಂದು ಕರ್ನಾಟಕ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 7 ಗಂಟೆಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ನಗರದ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದವರೆಗೆ ತಾಯಿ ಭುವನೇಶ್ವರಿ ಭಾವಚಿತ್ರ ಮೆರವಣಿಗೆ ಹಾಗೂ ಬೆಳಿಗ್ಗೆ 9 ಗಂಟೆಗೆ ಭಾರತರತ್ನ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಧ್ವಜಾರೋಹಣ ನೆರವೇರಿಸಲಿದ್ದಾರೆ.

ವಿಜಯಪುರ ನಗರ ಶಾಸಕರಾದ ಬಸನಗೌಡ ಆರ್.ಪಾಟೀಲ(ಯತ್ನಾಳ) ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜವಳಿ ಕಬ್ಬು, ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್.ಪಾಟೀಲ, ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ-2 ಪ್ರಕಾಶ ಹುಕ್ಕೇರಿ, ಸಂಸದ ರಮೇಶ ಜಿಗಜಿಣಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಹಣಮಂತ ಆರ್.ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರ, ಅಪ್ಪಾಜಿ ಸಿ.ಎಸ್.ನಾಡಗೌಡ, ವಿಠ್ಠಲ ಕಟಕದೊಂಡ, ಭೀಮನಗೌಡ ಬಸನಗೌಡ ಪಾಟೀಲ, ಅಶೋಕ ಮನಗೂಳಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

ಕಾರ್ಯಕ್ರಮಗಳ ವಿವರ : ನವೆಂಬರ್ 1ರ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಅಂದು ಬೆಳಿಗ್ಗೆ 9 ಗಂಟೆಗೆ ಧ್ವಜಾರೋಹಣ ನಂತರ ರಾಷ್ಟ್ರಗೀತೆ, ನಾಡಗೀತೆ, ಪಥಸಂಚಲನಾ ತಂಡಗಳ ವೀಕ್ಷಣೆ, ಗೌರವ ವಂದನೆ, ಕರ್ನಾಟಕ ರಾಜ್ಯೋತ್ಸವ ಸಂದೇಶ, ಕರ್ನಾಟಕ ಸಂಭ್ರಮ 50ರ ಅಂಗವಾಗಿ ಆಯ್ಕೆ ಮಾಡಿರುವ ನಾಡಿನ ಹೆಸರಾಂತ ಕವಿಗಳ 5 ಕನ್ನಡ ಗೀತೆಗಳನ್ನು ಹಾಡುವ ಮೂಲಕ ನಮನ, ಪಥ-ಸಂಚಲನಗಳ ನಿರ್ಗಮನ, ಸಾಧಕ-ರಿಗೆ ಸನ್ಮಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

# ಶಿಕ್ಷಕರ ಗೌರವ ಹೆಚ್ಚಿಸುವ ಗುರುವಂದನೆ ಕಾರ್ಯಕ್ರಮ



ಉದಯರಶ್ಮಿ ನ್ಯೂಸ್

ಹೊನವಾಡ: ಶಾಲೆಗಳಲ್ಲಿನ ಗಂಟೆಗಳ ಸದ್ದು ಹೆಚ್ಚು ಕೇಳುವ ದೇಶವು ಅಭಿವೃದ್ಧಿಯಲ್ಲಿ ಮುಂಚೂಣಿಯಲ್ಲಿರಲು ಸಾಧ್ಯ. ಶಿಕ್ಷಣವಂತ ವಿದ್ಯಾರ್ಥಿಗಳು ವೇಷಭೂಷಣದ ಬದಲಾಗಿ ಉತ್ತಮ ಆದರ್ಶದಿಂದ ಸಮಾಜದಲ್ಲಿ ಗುರ್ತಿಸಿಕೊಳ್ಳುವ ಮೂಲಕ ಶಿಕ್ಷಕರ ಋಣವನ್ನು ತೀರಿಸಬೇಕಿದೆ ಎಂದು ನಿವೃತ್ತ ಶಿಕ್ಷಕ ಎಸ್ ಎನ್ ಮಂಗೊಂಡ ಕರೆ ನೀಡಿದರು.

ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದ 2001,2004,2006ನೇ ಸಾಲಿನ ವಿದ್ಯಾರ್ಥಿಗಳ ಬಳಗ ವತಿಯಿಂದ ಹಮ್ಮಿಕೊಂಡ ಗುರುವಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಅಮರೇಶ್ವರ ಮಹಾರಾಜರು ಮಾತನಾಡಿ, ಏನೂ ತಿಳಿಯದ ಸಾಮಾನ್ಯನನ್ನು ಜೀವನದ ಮೌಲ್ಯದ ಮೂಲಕ ಗುರಿ ಸಾಧನೆಗೆ ಮಾರ್ಗ ತೋರುವವನೇ ಗುರು, ಶಿಕ್ಷಣದ ಯಜ್ಞದ ಸ್ವತ್ತು ಗುರು ತಾನು ಉರಿದು ವಿದ್ಯಾರ್ಥಿಗಳ ಮೂಲಕ ಜಗತ್ತಿಗೆ ಬೆಳಕು ನೀಡುವ ಗುರುವಿಗೆ ಎಷ್ಟು ನಮಿಸಿದರೂ ಸಾಲದು ಎಂದರು.

ಇತ್ತೀಚಿನ ದಿನಗಳಲ್ಲಿ ಗುರುಗಳ ಮೇಲಿನ ಗೌರವ ಕಡಿಮೆಯಾಗುತ್ತಿರುವುದು ಖೇದದ ಸಂಗತಿ. ಇನ್ನೊಂದೆಡೆ ಕೆಲ ವಿದ್ಯಾರ್ಥಿಗಳು ಶಿಕ್ಷಣ ನೀಡಿದ ಗುರುಗಳನ್ನು ನೆನೆದು ಶಿಕ್ಷಕ ಗುರುವಂದನೆಯಂತಹ ಕಾರ್ಯಕ್ರಮಗಳನ್ನು ನಡೆಸುತ್ತಿರುವುದು ಶಿಕ್ಷಕರ ಗೌರವವನ್ನು ಹೆಚ್ಚಿಸುವಂತೆ ಮಾಡಿದೆ ಎಂದು ಶಿವಯೋಗಿಶ್ವರ ಸ್ವಾಮಿಗಳು ಹೇಳಿದರು.

ವಿಜಯಪುರದ ಎಸ್ ಬಿ ವಿಸಡಮ್ ಕರಿಯರ್ ಆಕಾಡೆಮಿ ಸಂಸ್ಥಾಪಕ ಅಧ್ಯಕ್ಷ ಶರಣಯ್ಯ ಭಂಡಾರಿಮಠ ಮಾತನಾಡಿ, ಇತ್ತೀಚೆಗೆ ಶಿಕ್ಷಕ ವೃಂದಕ್ಕೆ ಗೌರವ ನೀಡುವ ಗುರುವಂದನೆ ಕಾರ್ಯಕ್ರಮಗಳು ಹೆಚ್ಚಾಗಿ ನಡೆಯುತ್ತಿದ್ದು, ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯನ್ನು ಹೆಚ್ಚಿಸಿದೆ, ಜ್ಞಾನದ ಹಸಿವನ್ನು ತೀರಿಸಿ ಬದುಕನ್ನು ರೂಪಿಸುತ್ತಿರುವ ಶಿಕ್ಷಕರ ಸೇವೆ ಅವಿಸ್ಮರಣೀಯ. ಶೈಕ್ಷಣಿಕವಾಗಿ ವಿದ್ಯಾರ್ಥಿ ಗಳನ್ನು ಪ್ರಭುದ್ಧಗೊಳಿಸಿದ ಶಿಕ್ಷಕರ ಸೇವೆಯನ್ನು ಸ್ಮರಿಸುತ್ತಿರುವ ಕಾರ್ಯಕ್ರಮ ಅರ್ಥಪೂರ್ಣ ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕ ತರಾ ಬಡಿಗೇರ, ಆರ್ ಎ ದಂಧರಗಿ, ಎಲ್ ಜಿ ಶಿಳ್ಳಿನ, ಎಸ್ ಎಂ ಕುಂಬಾರ, ಶ್ರೀಮತಿ ಪ ಬಿ ರಬೀನಾಳ, ಕೆ ಎಂ ಪರಣ್ಣನವರ, ಎಸ್ ಎನ್ ಕೋಟಿ, ವ್ಹಿ ಎಸ್ ಅಳ್ಳಿಮೊರೆ, ವ್ಹಿ ಹೆಚ್ ನಾಯಕ, ಬಿ ಎಂ ಬೂದಿಹಾಳ್, ಡಿ ಬಿ ಡೆಂಬ್ರೆ, ರೇ ಸಿ ಪಾಟೀಲ್, ಎಸ್ ಜಿ ಲಕ್ಕುಂಡಿಮಠ, ಅ ಬಿ ಬಿರಾದಾರ, ಸಿ ಆರ್ ಗೊರವರ, ಎಂ ಆರ್ ಬೆಳಗಲ್ಲ, ಸಿ ಎಂ ಚಂಡಕಿ, ಸಿ ಎಸ್ ಇಂಡಿ ಶಿಕ್ಷಕರು ಗೌರವ ಸನ್ಮಾನವನ್ನು ಸ್ವೀಕರಿಸಿದರು.

ಶಿವಲೀಲಾ ಪಾಟೀಲ್ ಗುರುಗಳ ಕುರಿತು ಮಾತನಾಡಿದರು. ಆಶಾಲತಾ ಹೊನವಾಡ ಪ್ರಾರ್ಥಿಸಿದರು. ಧರೆಪ್ಪ ಉಮದಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿರೇಶ್ ಬಡಿಗೇರ್ ಸ್ವಾಗತಿಸಿದರು. ಡಿ ಬಿ ಪಾಂಡೇಗಾವಿ ಹಾಗೂ ಆರ್ ಎಂ ಸಕ್ರಿ ನಿರೂಪಿಸಿದರು. ಗಿರಿಜಾ ಕುಂಬಾರ ವಂದಿಸಿದರು.

## ಎಳೆಯರು ನಾವು ಗೆಳೆಯರು ಸಂಘದಿಂದ ಹಮ್ಮಿಕೊಂಡ ಗುರುವಂದನಾ ಕಾರ್ಯಕ್ರಮ

# ವಿದ್ಯಾದಾನ ಮಾಡಿದ ಗುರುಗಳಿಗೆ ವಂದಿಸುವ ಕಾರ್ಯ ಸ್ತುತ್ಯಾರ್ಹ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಕಷ್ಟದ ದಿನಗಳನ್ನು ಯಾರೂ ಮರೆಯಬಾರದು. ಪಾಲಕರು ಎಷ್ಟೇ ಅನುಕೂಲಸ್ಥರಿದ್ದರೂ ನಿಮ್ಮ ಮಕ್ಕಳಿಗೆ ನಿಮ್ಮ ಮನೆತನ ನೋವು, ಹಸಿವಿನ ಜೊತೆಗೆ ಬಡತನದ ಪರಿಚಯ ಮಾಡಿ, ಅಂದಾಗ ಮಾತ್ರ ನಿಮ್ಮ ಮಕ್ಕಳು ಹಾಳಾಗದೇ ಜಗತ್ತನ್ನೇ ಬೆಳಗುವ, ರಕ್ಷಣೆ ಮಾಡುವ ಆದರ್ಶ ವ್ಯಕ್ತಿಗಳಾಗುತ್ತಾರೆ ಎಂದು ಶಿರಹಟ್ಟಿ ಭಾವೈಕ್ಯತಾ ಪೀಠದ ಜಗದ್ಗುರು ಫಕೀರ ದಿಂಗಾಲೇಶ್ವರ ಶ್ರೀಗಳು ಹೇಳಿದರು.



ಪಟ್ಟಣದ ವಿಬಿಸಿ ಹೈಸ್ಕೂಲ ಮೈದಾನದಲ್ಲಿ ಸನ್ 1993 ನೇ ಸಾಲಿನಲ್ಲಿ ಪಟ್ಟಣದ ಕೆಬಿಎಂಪಿ–ಎಸ್, ವಿಬಿಸಿ, ಮತ್ತು ಎಸ್‌ಎಸ್‌ಎಂ ಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಕಲಿತ ವಿದ್ಯಾರ್ಥಿಗಳ ಎಳೆಯರು ನಾವು ಗೆಳೆಯರು ಸಂಘದ ವತಿಯಿಂದ ರವಿವಾರ ಹಮ್ಮಿಕೊಳ್ಳಲಾಗಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

> ಜಗದ್ಗುರು ಬಸವೇಶ್ವರರ ಜನ್ಮಸ್ಥಳ ಬಸವನ ಬಾಗೇವಾಡಿ, ಐಕ್ಯವಾದ ಕೂಡಲ ಸಂಗಮ ಇವೆರಡರ ಮಧ್ಯೆ ನಾವು ಇರುವುದರಿಂದ ಎಲ್ಲ ಶರಣರ ನೆರಳು ನಮ್ಮ ಪಟ್ಟಣದ ಮೇಲೆ ಇದೆ. ಹಾಗಾಗಿ ನಮ್ಮ ಭೂಮಿಯಲ್ಲಿ ಅದೆಷ್ಟೋ ಶಕ್ತಿಗಳಿವೆ. ಇಲ್ಲಿ ಸೇವೆ ಸಲ್ಲಿಸಿದ ನಾವು ಬಾಗ್ಯವಂತರು.
>
> – ಎಸ್.ಬಿ.ಕನ್ನೂರ, ನಿವೃತ್ತ ಶಿಕ್ಷಕ ಸಾಹಿತಿ.

ಹಿಂದಿನ ಕಾಲದಲ್ಲಿ ಮಕ್ಕಳಿಗೆ ಹಸಿವಿನ ಪರಿಚಯ ವಾಗುತ್ತಿತ್ತು. ತಂದೆ ತಾಯಿಗಳು ಇದ್ದ ಬಟ್ಟೆ ಹರೆಯುವ ತನಕ ಮತ್ತೊಂದು ಬಟ್ಟೆಯನ್ನು ಕೊಡಿಸುತ್ತಿರಲಿಲ್ಲ. ಕಾಲಲ್ಲಿ ಚಪ್ಪಲಿ ಇರುತ್ತಿರಲಿಲ್ಲ. ದೂರದ ಶಾಲೆಗೆ ನಡೆದುಕೊಂಡೇ ಹೋಗಿ ಬರುತ್ತಿದ್ದರು. ಹಾಗಾಗಿ ಅವರಲ್ಲಿ ದೇಹಕ್ಕೆ ವ್ಯಾಯಾಮ ಸಿಕ್ಕು ಕಲಿಯುವ ಹಂಬಲ ಹೆಚ್ಚಾಗಿ ದೊಡ್ಡ ವ್ಯಕ್ತಿಗಳಾಗಿ ಬೆಳೆಯುತ್ತಿದ್ದರು. ಆದರೆ ಸಧ್ಯದ ಪರಿಸ್ಥಿತಿಯಲ್ಲಿ ಅದೆಷ್ಟೋ ತಂದೆ ತಾಯಿಗಳು ನಾನು ಕಷ್ಟಪಟ್ಟಿದ್ದು ಸಾಕು ನಮ್ಮ ಮಕ್ಕಳು ಕಷ್ಟಪಡಬಾರದೆಂದು ಕಷ್ಟದ ಪರಿಚಯವನ್ನು ತಮ್ಮ ಮಕ್ಕಳಿಗೆ ಮಾಡಿಸುತ್ತಿಲ್ಲ. ಇದು ದೊಡ್ಡ ತಪ್ಪು. ಇದರಿಂದ ಅದೆಷ್ಟೋ ವಿದ್ಯಾರ್ಥಿಗಳು ದುಶ್ಚಟಗಳಿಗೆ ಅಂಟಿ–ಕೊಂಡು ತಮ್ಮ ಜೀವನವನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ ಎನ್ನುವ ಸತ್ಯವನ್ನು ಎಲ್ಲ ಪಾಲಕರು ಅರಿತುಕೊಳ್ಳಬೇಕು ಎಂದರು.

> ಶಿಕ್ಷಕರು ವಿದ್ಯಾರ್ಥಿಗಳ ಮಧ್ಯೆ ಇರುವ ಸಂಬಂಧ ಅತ್ಯಂತ ಅನೋನ್ಯವಾದದ್ದು ಎಂದು ಇಂದು ಮತ್ತೊಮ್ಮೆ ಸಾಬೀತಾಯಿತು. ವಯೋವೃದ್ಧರಾದ ಶಿಕ್ಷಕರನ್ನು ಹುಡುಕಿ ಸನ್ಮಾನಿಸುವುದು ಅಂದುಕೊಂಡಷ್ಟು ಸರಳವಲ್ಲ. ಈ ಗುರುವಂದನಾ ಕಾರ್ಯಕ್ರಮ ಅತ್ಯಂತ ಅರ್ಥಪೂರ್ಣ ಮತ್ತು ಮಹತ್ವಪೂರ್ಣವಾಗಿದೆ.
>
> –ಪ್ರಭುಗೌಡ ದೇಸಾಯಿ, ಜಿ.ಪಂ.ಮಾಜಿ ಉಪಾಧ್ಯಕ್ಷರು.

> ರಾಷ್ಟ್ರಪತಿ, ಪ್ರಧಾನಮಂತ್ರಿ ಸೇರಿದಂತೆ ಎಲ್ಲರೂ ಬಾಗುವ ಏಕೈಕ ಗೌರಯುತವಾದ ಹುದ್ದೆ ಎಂದರೆ ಅದು ಶಿಕ್ಷಕರ ಹುದ್ದೆ. ಅವರ ಗೌರವ ಎಂದಿಗೂ ಕಡಿಮೆಯಾಗಲು ಸಾಧ್ಯವಿಲ್ಲ. ಕಲಿಸಿದ ಗುರುವನ್ನು ನೆನೆದು ದೊಡ್ಡ ಕಾರ್ಯಕ್ರಮದ ಮೂಲಕ ಸನ್ಮಾನಿಸಿ ಗೌರವಿಸುವ ಸ್ನೇಹಿತರ ಬಳಗದ ಕಾರ್ಯ ಆದರ್ಶ. ಅದ್ಭುತ, ಮಾದರಿಯ ಮತ್ತು ಶ್ಲಾಘನೀಯವಾದದ್ದು.
>
> – ಫಕೀರ ದಿಂಗಾಲೇಶ್ವರ ಶ್ರೀ. ಭಾವೈಕ್ಯತಾ ಪೀಠ. ಶಿರಹಟ್ಟಿ.

ಪಾವನ ಸಾನಿಧ್ಯ ವಹಿಸಿದ್ದ ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ದೇವರು ಮಾತನಾಡಿ, ಹಡೆದ ತಂದೆ ತಾಯಿಗಳನ್ನೇ ಅನಾಥ–ಾಶ್ರಮಕ್ಕೆ ಅಟ್ಟುವ ಸಧ್ಯದ ಕಾಲಘಟ್ಟದಲ್ಲಿ ಎಷ್ಟೋ ವರ್ಷಗಳ ಹಿಂದೆ ವಿದ್ಯೆ ದಾನ ಮಾಡಿದ ಗುರುಗಳಿಗೆ ವಂದಿಸುವ ಕಾರ್ಯ ನಿಜಕ್ಕೂ ಮೆಚ್ಚುವಂಥದ್ದು. ಇಂತಹ ಆದರ್ಶ ಕಾರ್ಯಕ್ರಮಗಳು ಮೇಲಿಂದ ಮೇಲೆ ನಡೆಯುತ್ತಿರಬೇಕು ಎಂದರು.

ಜಿಲ್ಲಾ ಪಂಚಾಯತ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸನ್ಮಾನಿತರ ಪರವಾಗಿ ನಿವೃತ್ತ ಶಿಕ್ಷಕ, ಸಾಹಿತಿ ಎಸ್.ಬಿ.ಕನ್ನೂರ, ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಭಾಜಪಾ ಜಿಲ್ಲಾ ಅಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ, ನಿವೃತ್ತ ಡಿವಾಯ್‌ಎಸ್ಪಿ ಎಸ್.ಎಸ್.ಹುಲ್ಲೂರ ಮಾತನಾಡಿದರು. ಇಟಗಿಯ ಭೂಕೈಲಾಸ ಹಿರೇಮಠ ಮೇಲ್ಗದ್ದುಗೆಯ ಗುರುಶಾಂತವೀರ ಶಿವಾಚಾರ್ಯರು, ಮಸೀಬಿನಾಳದ ಸಿದ್ಧರಾಮೇಶ್ವರ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಸಮಾಜ ಸೇವಕರಾದ ಸಿ.ಬಿ.ಅಸ್ಕಿ ಮತ್ತು ಮಲ್ಲಿಕಾರ್ಜುನ ಮದರಿ, ಗಣ್ಯ ವರ್ತಕ ಬಿ.ಸಿ.ಮೋಟಗಿ, ಮುಖಂಡ ಶಾಂತಗೌಡ ಪಾಟೀಲ ನಡಹಳ್ಳಿ, ಬಳಗದ ಅಧ್ಯಕ್ಷ ಪ್ರಕಾಶ ವೇದಿಕೆ ಮೇಲಿದ್ದರು. ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಪ್ರಭುರಾಜ ಕಲ್ಬುರ್ಗಿ, ಕಸಾಪ ನಿಕಟಪೂರ್ವ ಅಧ್ಯಕ್ಷ ಎಂ.ಬಿ.ನಾವದಗಿ, ನಿವೃತ್ತ ಯೋಧ ಎಸ್.ಸಿ.ಹಿರೇಮಠ ಸೇ–ರಿದಂತೆ ಅನೇಕರು ಭಾಗಿಯಾಗಿದ್ದರು.

ವಿದ್ಯಾರ್ಥಿ ಗೋಪಿಕಾ ರಾಯಚೂರ ಭರತನಾಟ್ಯದ ಮೂಲಕ ಕಾರ್ಯಕ್ರಮ ಪ್ರಾರಂಭವಾಯಿತು. ಬಳಗದ ರಾಜು ನಲವಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಮರಾಜ ಬಿರಾದಾರ ವಂದನೆಗಳನ್ನು ಸಲ್ಲಿಸಿದರು. ಶಿಕ್ಷಕ ಟಿ.ಡಿ.ಲಮಾಣಿ ನಿರ್ವಹಿಸಿದರು.

# 24ಸಾವಿರ ಶ್ಲೋಕಗಳ ಮಹಾ ಕಾವ್ಯ ರಾಮಾಯಣ :ಹಂಚಲಿ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: 24ಸಾವಿರ ಶ್ಲೋಕಗಳನ್ನು ಒಳಗೊಂಡ ಮಹಾ ಕಾವ್ಯವನ್ನು ರಚಿಸಿ ಮಹರ್ಷಿ ವಾಲ್ಮೀಕಿ ಅವರು ನಮಗೆ ಕೊಟ್ಟಿದ್ದಾರೆ. ಕಾರ್ಟೂನ್‌ಗಳಲ್ಲಿ ತೋರಿಸುವ ಚಿತ್ರಗಳನ್ನು ನೋಡಿ ನಾವು ಇದು ರಾಮಾಯಣ ಅಂದುಕೊಂಡಿದ್ದೇವೆ. ಆದರೆ ಮಹರ್ಷಿ ವಾಲ್ಮೀಕಿ ನಮಗೆ ಕೊಟ್ಟಿರುವ ರಾಮಾಯಣದ ಮೌಲ್ಯಗಳೇ ಬೇರೆ ಎಂದು ಬಾಗೇವಾಡಿಯ ಶಿಕ್ಷಕ, ವಾಗ್ಮಿ ಅಶೋಕ ಹಂಚಲಿ ಹೇಳಿದರು.

ಪಟ್ಟಣದ ವಾಲ್ಮೀಕಿ ವೃತ್ತದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ಹಾಗೂ ಪುರಸಭೆ ಕಾರ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿದರು.

> “ಇಲ್ಲಿನ ಅಧಿಕಾರಿಗಳು ಎಸ್‌ಟಿ ಅಲ್ಲದವರಿಗೆ ಎಸ್‌ಟಿ ಪ್ರಮಾಣ ಪತ್ರವನ್ನು ಬೇಕಾಬಿಟ್ಟಿಯಾಗಿ ನೀಡುತ್ತಿದ್ದು ಇದೊಂದು ದೊಡ್ಡ ಗಂಡಾಂತರವಾಗಿದೆ. ಇದರಿಂದ ನಮ್ಮ ಸಮುದಾಯದವರಿಗೆ ಯಾವುದೇ ಸವಲತ್ತುಗಳು ಸಿಗುತ್ತಿಲ್ಲ. ಹಾಗಾಗಿ ಈಗಾಗಲೇ ಬೇಕಾಬಿಟ್ಟಿಯಾಗಿ ನೀಡಲಾದ ಎಸ್‌ಟಿ ಪ್ರಮಾಣ ಪತ್ರವನ್ನು ರದ್ದು ಪಡಿಸಬೇಕು.
>
> – ಶಿವು ಕನ್ನೊಳ್ಳಿ, ವಾಲ್ಮೀಕಿ ಸಮಾಜದ ಯುವ ಮುಖಂಡ



ಕೌಟುಂಬಿಕ ಜೀವನದ ಮಹಾ ಮೌಲ್ಯಗಳನ್ನು ತೋ–ರಿಸುವ ರಾಜ, ತಂದೆ–ತಾಯಿಗಳು ಹೇಗಿರಬೇಕು, ಹೆಂಡತಿಯು ಆದರ್ಶಗಳು ಏನಾಗಿರಬೇಕು, ಸಹೋದರರ ಭಾತೃತ್ವದ ಬಾಂಧವ್ಯ ಹೇಗಿರಬೇಕು ಎನ್ನುವ ವಿಚಾರಧಾರೆಗಳನ್ನಿಟ್ಟುಕೊಂಡು ಬರೆದ ಮಹಾಕಾವ್ಯ ರಾಮಾಯಣವಾಗಿದೆ. ಅದಕ್ಕೆ ಇಂದಿಗೂ ಕೂಡ ರಾಮಾಯಣ ಜನಮಾನಸದಲ್ಲಿ ಉಳಿದು ಜನರ ದಾರಿ ತೋರುವ ಮಹಾ ದೀಪವಾಗಿ ಬೆಳಗುತ್ತಿದೆ ಎಂದರು.

### ಅದ್ದೂರಿ ಮೆರವಣಿಗೆ

ತಹಶೀಲ್ದಾರ ಕಾರ್ಯಾಲಯದಲ್ಲಿ ಸಮಾಜದ ಎಲ್ಲ ಮುಖಂಡರು ಹಾಗೂ ಅಧಿಕಾರಿಗಳು ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ನಂತರ ಅಂಬೇಡ್ಕರ ವೃತ್ತದಿಂದ ಸಂಗೊಳ್ಳಿ ರಾಯಣ್ಣ ವೃತ್ತ, ಕಿತ್ತೂರು ರಾಣಿ ಚನ್ನಮ್ಮ ವೃತ್ತ, ಬಸವೇಶ್ವರ ವೃತ್ತ, ಮುಖ್ಯ ಬಜಾರ, ದ್ಯಾಮವ್ವ ದೇವಿ ಕಟ್ಟೆ, ಲಕ್ಷ್ಮೀವೆಂಕಟೇಶ್ವರ ದೇವಸ್ಥಾನ ಮಾರ್ಗವಾಗಿ ವಾಲ್ಮೀಕಿ ವೃತ್ತದವರೆಗೆ ತೆರದ ವಾಹನದಲ್ಲಿ ವಾಲ್ಮೀಕಿ ಮಹರ್ಷಿಗಳ ಭಾವಚಿತ್ರದ ಅದ್ದೂರಿ ಮೆರವಣಿಗೆ ನಡೆಸಲಾಯಿತು. ಪಿಎಸ್‌ಐ ಸಂಜೀವ ತಿಪರೆಡ್ಡಿ ತಂಡ ಮೆರವಣಿಗೆಗೆ ಬಿಗಿ ಬಂದೋಬಸ್ತ ಒದಗಿಸಿದ್ದರು.

ಡಿಎಸ್‌ಎಸ್ ಮುಖಂಡ ಹರೀಶ ನಾಟೇಕಾರ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ರಾಮಾಯಣವನ್ನು ಪರಿಚಯಿಸಿದವರು. ಆದರೆ ಅವರ ಜನ್ಮದಿನದಂದು ಕೆಲವರೇ ಭಾಗಿಯಾಗಿದ್ದು, ಕಳೆದ ಕೆಲ ದಿನಗಳ ಹಿಂದೆ ಎಸ್‌ಟಿ ಮೀಸಲಾತಿಯ ಲಾಭ ಪಡೆದ ಯಾರೊಬ್ಬರೂ ಭಾಗಿಯಾಗದಿರುವುದು ಬೇಸರ ತಂದಿದೆ. ಎಲ್ಲ ಸರ್ಕಾರಗಳೂ ಕೂಡ ಹಲವಾರು ಒಳಪಂಗಡಗಳನ್ನು ಎಸ್‌ಸಿ, ಎಸ್‌ಟಿ ಸಮಾಜದಲ್ಲಿ ಸೇರಿಸಿ ನಿಜವಾದ ದಲಿತ ಸಮುದಾಯದ ಜನರಿಗೆ ಅನ್ಯಾಯ ಮಾಡುತ್ತಲೇ ಬರುತ್ತಿದ್ದಾರೆ ಎಂದರು.

ಡಿಎಸ್‌ಎಸ್ ರಾಜ್ಯ ಸಂಘಟನಾ ಸಂಚಾಲಕ ಡಿ.ಬಿ.ಮುದೂರ ಮಾತನಾಡಿ, ರಾಮಾಯಣ, ಮಹಾಭಾರತ ಮತ್ತು ಸಂವಿಧಾನ ಬರೆದರು. ಆದರೂ ಅವರ ಹೆಸರುಗಳು ಎಲ್ಲಿಯೂ ಬರಲ್ಲ. ಡಾ.ಬಾಬಾ ಸಾಹೇಬರು ಸಂವಿಧಾನ ಬರೆದದ್ದಕ್ಕಾಗಿ ಎಲ್ಲ ಊರುಗಳಲ್ಲಿ ಅವರ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗಿದೆ. ಆದರೆ ಮಹಾಭಾರತ ಬರೆದ ವ್ಯಾಸರ ಮತ್ತು ರಾಮಾಯಣ ಬರೆದ ಮಹರ್ಷಿ ವಾಲ್ಮೀಕಿಯವರ ಮೂರ್ತಿಗಳು ಎಲ್ಲೋ ಕೆಲವು ಕಡೆ ಮಾತ್ರ ಕಾಣುತ್ತೇವೆ. ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣವಾಗುತ್ತಿದೆ. ಆದರೆ ವಾಲ್ಮೀಕಿ ಮಹರ್ಷಿಗಳ ಮೂರ್ತಿ ನಿರ್ಮಿಸಿಲ್ಲದಿರುವುದು ಖೇದದ ಸಂಗತಿ ಎಂದರು.

> “ಜಗತ್ತನ್ನು ಕೆಲವು ದೇಶಗಳು, ಭಯೋತ್ಪಾದನೆಯಿಂದ, ಶಸ್ತ್ರಗಳ ಬಲದಿಂದ, ಖಡ್ಗದ ಬಲದಿಂದ, ಹಣದ ಬಲದಿಂದ ಗೆಲ್ಲಬೇಕು ಅಂತ ಹೊರಟರೆ ಭಾರತ ಮಾತ್ರ ತನ್ನ ಆಧ್ಯಾತ್ಮದ ಬಲದಿಂದ ಗೆಲ್ಲಲು ಹೊರಟಿದೆ. ಹಾಗಾಗಿಯೇ ಇಡೀ ವಿಶ್ವ ಭಾರತದತ್ತ ತಿರುಗಿ ನೋಡುತ್ತಿದೆ.”
>
> – ಅಶೋಕ ಹಂಚಲಿ. ಶಿಕ್ಷಕ ಮತ್ತು ವಾಗ್ಮಿ, ಬಾಗೇವಾಡಿ

ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಗುರು ತಾರನಾಳ, ಯುವ ಮುಖಂಡ ಶಿವು ಕನ್ನೊಳ್ಳಿ ಮಾತನಾಡಿದರು.

ತಾ.ಪಂ ಪ್ರಭಾರ ಯೋಜನಾಧಿಕಾರಿ ಖೂಬಾಸಿಂಗ್ ಜಾಧವ, ಗ್ರೇಡ್ 2 ತಹಶೀಲ್ದಾರ ಎಸ್.ಬಿ.ಕಟ್ಟಿ, ತಾಲೂಕು ಆರೋಗ್ಯ ಆಡಳಿತಾಧಿಕಾರಿ ಸತೀಶ ತಿವಾರಿ, ಎಸ್‌ಸಿ–ಎಸ್‌ಟಿ ನೌಕರ ಸಂಘದ ಅಧ್ಯಕ್ಷ ಪರಶುರಾಮ ನಾಯ್ಕೋಡಿ, ಪುರಸಭೆ ಸದಸ್ಯರಾದ ಚನ್ನಪ್ಪ ಕಂಠಿ ಮತ್ತು ಯಲ್ಲಪ್ಪ ನಾಯಕಮಕ್ಕಳ, ಮಾಜಿ ಸದಸ್ಯರಾದ ಹಣಮಂತ ನಾಯಕಮಕ್ಕಳ ಮತು ಸಂತೋಷ ನಾಯ್ಕೋಡಿ, ಮುಖಂಡರಾದ ಚನ್ನಪ್ಪ ವಿಜಯಕರ, ಶ್ರೀಶೈಲ್ ಪೂಜಾರಿ, ರಾಮಣ್ಣ ರಾಜನಾಳ, ಪ್ರಶಾಂತ ಕಾಳೆ, ರಾಜು ತುಂಬಗಿ, ಮಾನಸು ನಾಯಕ, ಮಂಜುನಾಥ ಪೂಜಾರಿ, ದೇವೇಂದ್ರ ವಾಲೀಕಾರ, ಅಂಬ್ರೀಶ ಬಿರಾದಾರ, ಯಲಗೂರೇಶ ನಾಯಕ ಸೇರಿದಂತೆ ಮತ್ತೀತರರು ಇದ್ದರು.

ಸಂಗಮೇಶ ಶಿವಣಗಿ ತಂಡದವರು ಪ್ರಾರ್ಥಿಸಿದರು. ಸಮಾಜ ಕಲ್ಯಾಣ ಇಲಾಖೆಯ ತಾಲೂಕು ಉಪನಿರ್ದೇಶಕ ಉಮೇಶ ಲಮಾಣಿ ಸ್ವಾಗತಿಸಿದರು. ಗುಂಡು ಚೌಹಾಣ ನಿರ್ವಹಿಸಿದರು.

# ಧೂರ್ತ ಬಕಪಕ್ಷಿ

**ಉದಯರಶ್ಮಿ ದಿನಪತ್ರಿಕೆ**



**ವಿದ್ಯಾರ್ಥಿನಿಧಿ**



– ಮಂಡ್ಯ.ಮ.ನಾ.ಉಡುಪ

ಅದೊಂದು ದೊಡ್ಡ ಸರೋವರ. ಆ ಸರೋವರದಲ್ಲಿ ನೂರಾರು ಮೀನು ಕಪ್ಪೆ ಏಡಿಗಳೂ ವಾಸವಾಗಿದ್ದವು. ಅದೇ ಸರೋವರದಲ್ಲಿ ಒಂದು ಬಕಪಕ್ಷಿಯೂ ಇತ್ತು. ಅದು ಮೀನು ಕಪ್ಪೆಮರಿಗಳನ್ನು ತಿಂದು ಬದುಕುತ್ತಿತ್ತು .

ದಿನ ಕಳೆದಂತೆ ಆ ಬಕಪಕ್ಷಿಗೆ ವಯಸ್ಸಾಗುತ್ತಾ ಬಂತು. ಬಕಪಕ್ಷಿ ಇನ್ನು ಬೇಟೆಯಾಡಿ ಬದುಕುವ ಶಕ್ತಿ ಕಳೆದುಕೊಳ್ಳುವಂತಹ ಸಮಯ ಬಂತು. ಅದು ಒಂದು ಸಂಚನ್ನು ರೂಪಿಸಿತ್ತು. ಬಕಪಕ್ಷಿ ಬೇಟೆಯಾಡುವುದನ್ನು ನಿಲ್ಲಿಸಿ ಧ್ಯಾನ ಮಾಡುವುದರಲ್ಲೇ ಮಗ್ನವಾಗಿತ್ತು. ಕಪ್ಪೆಮರಿಗಳು ಮೀನಿನಮರಿಗಳು ಬಕಪಕ್ಷಿಯ ಬಳಿಗೆ ಸುಳಿದಾಡಿದಾಗಿಯೂ ಬಕಪಕ್ಷಿ ಸುಮ್ಮನಿತ್ತು. ಇವುಗಳ ಚೇಷ್ಟೆ ಜೋರಾದರೂ ಬಕಪಕ್ಷಿ ಸುಮ್ಮನಿರುವುದನ್ನು ಗಮನಿಸಿದ ಮುದಿಕಪ್ಪೆಯೊಂದು ಕೇಳಿತು

“ಯಾಕಣ್ಣ ಸಪ್ಪಗಿದ್ದ ...?”

ಬಕಪಕ್ಷಿ ಹೇಳಿತು

“ ಏನು ಮಾಡುವುದನ್ನು ನನಗೊಂದು ಸಮಸ್ಯೆ ಕಾಡುತ್ತಿದೆ “

“ ಅದು ಯಾವ ಸಮಸ್ಯೆ...?”

“ ಇನ್ನು ಕೆಲವೇ ದಿನದಲ್ಲಿ ನಮ್ಮ ಬದುಕು ಮುಗಿದೇ ಹೋಗಲಿದೆ...”

“ ಹೌದೇ “

“ನಮ್ಮ ಈ ಕೆರೆಯ ನೀರು ಕೆಲವೇ ದಿನಗಳಲ್ಲಿ ಬತ್ತಿ ಹೋಗಲಿದೆ ನಮ್ಮ ಗ್ರಾಮಕ್ಕೆ ಭೀಕರ ಬರಗಾಲ ಕಾಡಲಿದೆ “

“ಮುಂದೇನು ಗತಿ “

“ನೋಡು ನಾನು ನನ್ನ ಕುರಿತಾಗಿ ಯೋಚಿಸುತ್ತಿಲ್ಲ ನಾನು ಇಲ್ಲಿಂದ ಗಾವುದ ದೂರದಲ್ಲಿ ಇನ್ನೊಂದು ಕೆರೆಯನ್ನು ನೋಡಿಕೊಂಡು ಬಂದಿರುವೆ. ಆ ಕೆರೆಯಲ್ಲಿ ಸದಾ ಕಾಲ ನೀರಿರುತ್ತದೆ. ನನಗೆ ಚಿಂತೆಯಿಲ್ಲ. ಚಿಂತೆ ಇರುವುದು ನಿಮ್ಮ ಕುರಿತು. ನೀರಿಲ್ಲದೆ ನೀವುಗಳು ಬದುಕುವಂತೆಯೇ ಇಲ್ಲ” ಬಕಪಕ್ಷಿಯ ಮಾತಿನ ಮೇಲೆ ಕಪ್ಪೆಗೆ ನಂಬಿಕೆ ಬಂತು. ಅದು ಕೇಳಿತ್ತು.

“ನಮ್ಮೆಲ್ಲರ ಪ್ರಾಣ ಉಳಿಸುವ ಮಾರ್ಗ ಇಲ್ಲವೇ ?”

ಇದೇ ಸಮಯವೆಂದು ಕಾದಿದ್ದ ಬಕಪಕ್ಷಿಯು ಹೇಳಿತು.

“ನಿಮ್ಮೆಲ್ಲರ ಪ್ರಾಣ ಉಳಿಸುವ ಮಾರ್ಗವೊಂದಿದೆ “

“ಅದು ಯಾವ ಮಾರ್ಗ ? “

“ನಿಮ್ಮನ್ನು ದಿನಕ್ಕೊಬ್ಬರಂತೆ ನಾನು ಪಕ್ಕದ ಕೆರೆಗೆ ಕರೆದೊಯ್ಯುವೆ. ಈ ಸರೋವರದ ನೀರು ಬತ್ತುವ ಒಳಗಾಗಿ ನಿಮ್ಮನ್ನೆಲ್ಲ ಪಕ್ಕದ ಕೆರೆಗೆ ಸಾಗಿಸುವೆ..”

ಬಕಪಕ್ಷಿಯ ಬಣ್ಣದ ಮಾತಿಗೆ ಕಪ್ಪೆಯಾದಿಯಾಗಿ ಇಡೀ ಜಲಚರಗಳು ಒಪ್ಪಿದವು. ಇನ್ನೇನು ಸರೋವರ ಬತ್ತಿ ಹೋಗಿ ನಾವೆಲ್ಲ ಸಾಯುವ ಮೊದಲು ಹೊಸ ದಾರಿ ಹುಡುಕುವ ಕುರಿತು ಅವೆಲ್ಲಾ ಯೋಚಿಸಿ ಬಕಪಕ್ಷಿಯ ಜೊತೆ ಹೋಗಲು ನಿರ್ಧಾರ ಮಾಡಿದೆವು.

ಬಕಪಕ್ಷಿಯು ದಿನಾಲೂ ಒಂದೊಂದು ಮೀನು ಹಾಗೇ ಕಪ್ಪೆಯನ್ನು ತನ್ನ ಕೊಕ್ಕಿನಲ್ಲಿ ಕಚ್ಚಿಕೊಂಡು ಹೋಗಿ ತಿಂದು ಮುಗಿಸುತ್ತಿತು.

ಹೀಗೆ ಜಲಚರಗಳು ಬಕಪಕ್ಷಿಯ ಮಾತಿನ ಮೋಡಿಗೆ ಮರುಳಾಗಿ ಪ್ರಾಣ ಕಳೆದುಕೊಂಡಿದ್ದವು. ಇಡಿ ಸರೋವರವೇ ಖಾಲಿಯಾಯಿತು. ಸರೋವರದಲ್ಲಿ ಏಡಿಯೊಂದು ಉಳಿದಿತ್ತು. ಅದು ಬಕಪಕ್ಷಿಯನ್ನುದ್ದೇಶಿಸಿ ಕೇಳಿತು

“ಅಣ್ಣ ನನ್ನನ್ನು ಅಲ್ಲಿಗೆ ಕರೆದುಕೊಂಡು ಹೋಗು “

ಬಕಪಕ್ಷಿಯು ಏಡಿಯನ್ನು ತನ್ನ ಕೊಕ್ಕಿನಲ್ಲಿ ಕಚ್ಚಿಕೊಂಡು ಹೊರಟಿತು. ಮಾರ್ಗ ಮಧ್ಯದಲ್ಲಿ ಕಪ್ಪೆ ಮೀನುಗಳು ಮೂಳೆಯ ರಾಶಿಯನ್ನು ನೋಡಿ ಏಡಿಯು ಪರಿಸ್ಥಿತಿಯನ್ನು ಊಹಿಸಿತು. ಅದು ತಡಮಾಡದೇ ತನ್ನ ಚೂಪಾದ ಕೊಂಡಿಗಳಿಂದ ಬಕಪಕ್ಷಿಯ ಕತ್ತನ್ನೇ ಕತ್ತರಿಸಿತು.



# ಜೀವವಿಮಾ ಯೋಜನೆ: ನೊಂದಾಯಿಸಲು ಮನವಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ ಹಾಗೂ ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆಗಳನ್ನು ಪ್ರತಿಯೊಬ್ಬ ನಾಗರಿಕರಿಗೆ ತಲುಪಿಸಲು ಕೇಂದ್ರ ಸರ್ಕಾರವು 2023ರ ಅಕ್ಟೋಬರ್ 01ರಿಂದ ಡಿಸೆಂಬರ್ 31ರವರೆಗೆ ಜನ ಸುರಕ್ಷಾ ಅಭಿಯಾನ ಹಮ್ಮಿಕೊಂಡಿದೆ.

ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆಯಡಿ 18 ರಿಂದ 70 ವರ್ಷ ವಯಸ್ಸಿನವರು ವರ್ಷಕ್ಕೆ 20 ರೂ. ಪಾವತಿಸುವ ಮೂಲಕ ಎರಡು ಲಕ್ಷದ ಅಪಘಾತ ವಿಮೆ ಹಾಗೂ ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆಯಡಿ 18 ರಿಂದ 50 ವರ್ಷ ವಯಸ್ಸಿನವರು ವರ್ಷಕ್ಕೆ 436 ರೂ. ಪಾವತಿಸುವ ಮೂಲಕ ಎರಡು ಲಕ್ಷ ಜೀವವಿಮೆ ಪಡೆದುಕೊಳ್ಳಬಹುದಾಗಿದ್ದು, ಸಾರ್ವಜನಿಕರು ತಮ್ಮ ಉಳಿತಾಯ ಖಾತೆ ಇರುವ ಬ್ಯಾಂಕ್‌ನ್ನು ಸಂಪರ್ಕಿಸಿ ಈ ವಿಮೆಗಳಿಗೆ ನೊಂದಾಯಿಸಿಕೊಳ್ಳುವಂತೆ ಜಿಲ್ಲಾಧಿಕಾ–ರಿಗಳು ತಿಳಿಸಿದ್ದಾರೆ.

ಅದರಂತೆ ಅಕ್ಟೋಬರ್ 01 ರಿಂದ ಡಿಸೆಂಬರ್ 31ರವರೆಗೆ ಘರ ಘರ ಕೆಸಿಸಿ ಅಭಿಯಾನ ಸಹ ಹಮ್ಮಿಕೊಂಡಿದ್ದು, ಯಾವುದೇ ಬ್ಯಾಂಕ್ ಅಥವಾ ಸೊಸೈಟಿಯಿಂದ ಬೆಳೆಸಾಲ ಪಡೆಯದಿರುವ ರೈತರು ಈ ಅಭಿಯಾನದಡಿ ತಮ್ಮ ಉಳಿತಾಯ ಖಾತೆ ಇರುವ ಅಥವಾ ತಮ್ಮ ಹತ್ತಿರದ ಬ್ಯಾಂಕಿಗೆ ಕೆಸಿಸಿ (ಬೆಳೆಸಾಲ) ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಓಬವ್ವ ಜಯಂತಿ :ನ.3ರಂದು ಪೂರ್ವಭಾವಿ ಸಭೆ

**ಉದಯರಶ್ಮಿ ದಿನಪತ್ರಿಕೆ**

ವಿಜಯಪುರ: ಜಿಲ್ಲಾಡಳಿತ ವಿಜಯಪುರ ವತಿಯಿಂದ ನವೆಂಬರ್ 11 ರಂದು ವೀರರಾಣಿ ಒನಕೆ ಒಬವ್ವ ಜಯಂತಿ ಆಚರಿಸುವ ಕುರಿತು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ : 03–11–2023 ರಂದು ಸಂಜೆ 5 ಗಂಟೆಗೆ ಪೂರ್ವಸಿದ್ಧತಾ ಸಭೆ ಆಯೋಜಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.